# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **1008** |
| **ಸದಸ್ಯರ ಹೆಸರು** | : | **ಶ್ರೀ ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | : | **14.03.2025** |
| **ಉತ್ತರಿಸುವ ಸಚಿವರು** | : | **ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು** |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣ ಭಾಗದ ಶಿಕ್ಷಣ ಅಭಿವೃದ್ಧಿಗೆ ಹಾಕಿಕೊಂಡಿರುವ ಯೋಜನೆಗಳೇನು; (ಯೋಜನೆವಾರು ವಿವರ ನೀಡುವುದು) | ಗ್ರಾಮೀಣ ಭಾಗದ ಪ್ರದೇಶಗಳನ್ನೊಳಗೊಂಡಂತೆ ಎಲ್ಲಾ ಸರ್ಕಾರಿ ಶಾಲಾ ಮಕ್ಕಳ ಶಿಕ್ಷಣ ಅಭಿವೃದ್ಧಿಗಾಗಿ ಈ ಕೆಳಕಂಡ ಕಾರ್ಯಕ್ರಮ ಹಾಗೂ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ.<br>**ಪ್ರಾಥಮಿಕ ಶಿಕ್ಷಣ**<br>1. ವಿದ್ಯಾರ್ಥಿಗಳಿಗೆ ಉಚಿತ ಪಠ್ಯ ಪುಸ್ತಕ, ಸಮವಸ್ತ್ರ, ಶೂ, ಸಾಕ್ಸ್, ಮಧ್ಯಾಹ್ನದ ಉಪಹಾರ ಕ್ಷೀರಭಾಗ್ಯ ಉಚಿತವಾಗಿ ನೀಡಲಾಗುತ್ತದೆ.<br>2. ಗುಣಾತ್ಮಕ ಶಿಕ್ಷಣಕ್ಕಾಗಿ ನಿಯಮಿತವಾಗಿ ಶಿಕ್ಷಕರಿಗೆ ತರಬೇತಿ ಆಯೋಜಿಸಲಾಗುತ್ತದೆ.<br>3. ಸರ್ಕಾರಿ ಶಾಲೆಗಳಲ್ಲಿ ತಂತ್ರಜ್ಞಾನ ಆಧಾರಿತ ಶಿಕ್ಷಣವನ್ನು ಪ್ರೋತ್ಸಾಹಿಸಲಾಗುತ್ತಿದೆ.<br>4. 74 ಶೈಕ್ಷಣಿಕವಾಗಿ ಹಿಂದುಳಿದ ತಾಲ್ಲೂಕುಗಳಲ್ಲಿ 6 ರಿಂದ 10ನೇ ತರಗತಿಯವರೆಗೆ ಇಂಗ್ಲೀಷ್ ಮಾಧ್ಯಮದಲ್ಲಿ ಕೇಂದ್ರಿಯ ವಿದ್ಯಾಲಯ ಮಾದರಿಯಲ್ಲಿ ಆದರ್ಶ ವಿದ್ಯಾಲಯಗಳು (ಮಾದರಿ ಶಾಲೆಗಳು) ಪ್ರಾರಂಭಿಸಲಾಗಿದೆ.<br>5. ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ ನೀಡಲು 86 ವಸತಿ ನಿಲಯಗಳನ್ನು ಪ್ರಾರಂಭಿಸಲಾಗಿದೆ. ಸದರಿ ವಸತಿ ನಿಲಯಗಳಲ್ಲಿ ಯೋಗ, ಕರಾಟೆ, ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br>6. ಶಿಕ್ಷಣದಿಂದ ವಂಚಿತರಾದ ವಿದ್ಯಾರ್ಥಿಗಳನ್ನು ಗುರುತಿಸಿ, ಸಂಬಂಧಿಸಿದ ಪೋಷಕರು ಮತ್ತು ವಿದ್ಯಾರ್ಥಿಗಳನ್ನು ಮನವೊಲಿಸಿ, ಪುನಃ ಶಾಲೆಗೆ ದಾಖಲಿಸಲಾಗುತ್ತಿದೆ. ಈ ಕಾರ್ಯವನ್ನು ಎಸ್.ಡಿ.ಎಂ.ಸಿ, ಸ್ಥಳೀಯ ಸಂಸ್ಥೆಗಳು ಹಾಗೂ ಸಮುದಾಯದ ಸಹಕಾರದೊಂದಿಗೆ ನಿರ್ವಹಿಸಲಾಗುತ್ತಿದೆ.<br>7. ಎಸ್.ಎ.ಟಿ.ಎಸ್ ವ್ಯವಸ್ಥೆ ಮೂಲಕ ವಿದ್ಯಾರ್ಥಿಗಳ ಸಾಧನೆಯನ್ನು ಜಾಡುಹಿಡಿಯಲಾಗುತ್ತಿದೆ.<br>8. ಶಾಲಾ ದತ್ತು ಯೋಜನೆ (ಸಿ.ಎಸ್.ಆರ್) ಮೂಲಕ ಶಿಕ್ಷಣದ ಗುಣಮಟ್ಟವನ್ನು ಉತ್ತಮ ಪಡಿಸಲಾಗುತ್ತಿದೆ.<br>9. 6 ಮತ್ತು 8ನೇ ತರಗತಿಗೆ 22875 ಜಿ.ಪಿ.ಟಿ ಶಿಕ್ಷಕರ ನೇಮಕಾತಿ ಮಾಡಿಕೊಳ್ಳುವ ಮೂಲಕ ಗುಣಾತ್ಮಕ ಶಿಕ್ಷಣಕ್ಕಾಗಿ ಕ್ರಮವಹಿಸಲಾಗಿದೆ.<br>10. 2023-24ನೇ ಸಾಲಿನಲ್ಲಿ ರಾಜ್ಯಾದ್ಯಂತ ಖಾಲಿ ಇರುವ ಹುದ್ದೆಗಳಿಗೆದುರಾಗಿ ತಾತ್ಕಾಲಿಕವಾಗಿ ಪ್ರಾಥಮಿಕ ಶಾಲೆಗಳಿಗೆ 35000 ಅತಿಥಿ ಶಿಕ್ಷಕರನ್ನು ನೇಮಿಸಿಕೊಂಡು ಮಕ್ಕಳ ಬೋಧನೆಗೆ ತೊಂದರೆಯಾಗದಂತೆ ನೇಮಿಸಿಕೊಂಡು ಮಕ್ಕಳ ಕಲಿಕೆಗೆ ಪ್ರೋತ್ಸಾಹಿಸಲಾಗಿರುತ್ತದೆ.<br>11. ರಾಜ್ಯದ ಸರ್ಕಾರಿ & ಅನುದಾನಿತ ಶಾಲೆಗಳಿಂದ ಸಾಧನೆ ಮಾಡಿದ ಶಿಕ್ಷಕರುಗಳಿಗೆ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಮಾಡಿ ಸನ್ಮಾನಿಸಲಾಗುತ್ತಿದೆ. ಇದರಿಂದಾಗಿ ಶಿಕ್ಷಕರು |

ತಮ್ಮ ಬೋಧನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳುವುದರೊಂದಿಗೆ ಪರಿಣಾಮಕಾರಿ ಪಾಠ ಬೋಧನೆಗೆ ಶ್ರಮಿಸುವರು.

12. ಶತಮಾನ ಪೂರೈಸಿದ 243 ಶಾಲೆಗಳನ್ನು ಪಾರಂಪರಿಕ ಶಾಲೆಗಳೆಂದು ಗುರ್ತಿಸಿ ಶಾಲಾ ನವೀಕರಣಕ್ಕಾಗಿ ಸರ್ಕಾರದಿಂದ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.

13. ಪ್ರತಿ ವರ್ಷ ರಾಜ್ಯದಲ್ಲಿ 8 ಉತ್ತಮ ಶಾಲೆಯನ್ನು ಗುರ್ತಿಸಿ ಸ್ವಾಭಿಮಾನಿ ಶಾಲೆಗಳಾಗಿ ಆಯ್ಕೆ ಮಾಡಿ ಸರ್ಕಾರದಿಂದ ಅನುದಾನವನ್ನು ನೀಡಲಾಗುತ್ತಿದೆ.

14. ರಾಜ್ಯದ ಎಲ್ಲಾ ಶಾಲೆಗಳಿಗೆ ಸಿ.ಆರ್.ಪಿ, ಬಿ.ಆರ್.ಪಿ, ಬಿ.ಆರ್.ಸಿ ಡಯಟ್ ಉಪನ್ಯಾಸಕರು ವಿಷಯ ಪರಿವೀಕ್ಷಕರು ಹಾಗೂ ನೋಡಲ್ ಅಧಿಕಾರಿಗಳು ಪ್ರತಿ ಮಾಹೆ ಸದರಿ ಶಾಲೆಗಳ ಭೇಟಿ ನೀಡುವುದರೊಂದಿಗೆ ಅಗತ್ಯ ಸಲಹೆ, ಸೂಚನೆ, ಮಾರ್ಗದರ್ಶನ ನೀಡಿ ಅನುಪಾಲನೆ ಮಾಡಲು ಸೂಚಿಸಲಾಗಿರುತ್ತದೆ.

15. ಪಿ.ಆರ್.ಡಿ.ಎಫ್ ಯೋಜನೆಯಡಿ ಗ್ರಾಮಸಭೆ ನಡೆಸುವ ಮೂಲಕ ಮಕ್ಕಳ ದಾಖಲಾತಿ ಆಂದೋಲನವನ್ನು ಹಮ್ಮಿಕೊಂಡು ಮಕ್ಕಳ ದಾಖಲಾತಿ ಹೆಚ್ಚಿಸಲು ಕ್ರಮವಹಿಸುವುದು.

16. ಎನ್.ಟಿ.ಎಸ್.ಇ/ಎನ್.ಎಂ.ಎಂ.ಎಸ್ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಡಿ.ಎಸ್.ಇ.ಆರ್.ಟಿ & ಎಂ.ಹೆಚ್.ಆರ್.ಡಿ ಮೂಲಕ ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.

17. ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 1ನೇ ತರಗತಿಯಿಂದ ಆಂಗ್ಲ ಮಾಧ್ಯಮವನ್ನು ಪ್ರಾರಂಭಿಸಲು ಬೇಡಿಕೆ ಬಂದ ಹಿನ್ನೆಲೆಯಲ್ಲಿ ಸರ್ಕಾರವು 2019-20ನೇ ಸಾಲಿನಲ್ಲಿ 1001 ಕನ್ನಡ ಮಾಧ್ಯಮ ಶಾಲೆಗಳಲ್ಲಿ, 2020-21ನೇ ಸಾಲಿನಲ್ಲಿ 1003 ಕನ್ನಡ ಮಾಧ್ಯಮ ಶಾಲೆಗಳಲ್ಲಿ ಹಾಗೂ 400 ಉರ್ದು ಮಾಧ್ಯಮ ಶಾಲೆಗಳಲ್ಲಿ ದ್ವಿ-ಭಾಷಾ ಮಾಧ್ಯಮವನ್ನು ಪ್ರಾರಂಭಿಸಲಾಯಿತು. ಪ್ರಸ್ತುತ ಒಟ್ಟು 2404 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ದ್ವಿ-ಭಾಷಾ ವಿಭಾಗಗಳು ಕಾರ್ಯನಿರ್ವಹಿಸುತ್ತದೆ.

18. 2024-25ನೇ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಈಗಾಗಲೇ ನಡೆಯುತ್ತಿರುವ ಕನ್ನಡ ಮತ್ತು ಇತರೆ ಮಾಧ್ಯಮದ ತರಗತಿಯ ಜೊತೆಗೆ 1792 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 1ನೇ ತರಗತಿಯಿಂದ ದ್ವಿ-ಭಾಷಾ ಮಾಧ್ಯಮ ಪ್ರಾರಂಭಿಸಲಾಗಿದೆ.

19. 2024-25ನೇ ಸಾಲಿನಲ್ಲಿ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ 59 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಉನ್ನತೀಕರಿಸಲಾಗಿದೆ.

20. 2024-25ನೇ ಸಾಲಿನಲ್ಲಿ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ 91 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 7ನೇ ತರಗತಿಯನ್ನು 8ನೇ ತರಗತಿಯನ್ನಾಗಿ ಉನ್ನತೀಕರಿಸಲಾಗಿದೆ.

21. 2024-25ನೇ ಸಾಲಿನಲ್ಲಿ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ 25 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 1ನೇ ತರಗತಿಯಿಂದ ದ್ವಿ-ಭಾಷಾ ಮಾಧ್ಯಮದ ತರಗತಿಯ ವಿಭಾಗ ಪ್ರಾರಂಭಿಸಲಾಗಿದೆ.

ಶಾಲೆ ಬಿಟ್ಟ ಮಕ್ಕಳನ್ನು ಮರಳಿ ಶಾಲೆಗೆ ಕರೆತರಲು ಪ್ರತಿ ಬ್ಲಾಕ್‌ನಲ್ಲಿ ನೋಡಲ್ ಅಧಿಕಾರಿಗಳ ನೇಮಿಸಿ ಪೋಷಕರ ಮತ್ತು ಮಕ್ಕಳ ಮನವೊಲಿಸಿ ಶಾಲೆಗೆ ಕರೆತರಲು ಕ್ರಮವಹಿಸಲಾಗುತ್ತಿದೆ.

**ಪ್ರೌಢ ಶಿಕ್ಷಣ**

ಪ್ರೌಢ ಶಿಕ್ಷಣ ವಿಭಾಗದಲ್ಲಿ ಗ್ರಾಮೀಣ ಮತ್ತು ನಗರ ಭಾಗ ಎರಡು ಸೇರಿಸಿ ಶಿಕ್ಷಣ ಅಭಿವೃದ್ಧಿಗೆ ಅವಶ್ಯಕತೆ ಅನುಸಾರ ಶಿಕ್ಷಕರ ನೇಮಕಾತಿ, ಅತಿಥಿ ಶಿಕ್ಷಕರ ನೇಮಕಾತಿ ಮತ್ತು ಅರ್ಹ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯನ್ನು ಪ್ರೌಢ ಶಾಲೆಗೆ ಉನ್ನತೀಕರಿಸುವ ಬಗ್ಗೆ ಈ ಚಟುವಟಿಕೆಗಳನ್ನು ನಿರ್ವಹಿಸಲಾಗುತ್ತಿದೆ.

- ಗ್ರಾಮೀಣ ಭಾಗದ ಶಿಕ್ಷಣ ಅಭಿವೃದ್ಧಿಗೆ ಪ್ರತ್ಯೇಕ ಯೋಜನೆಗಳು ಇರುವುದಿಲ್ಲ.
- ಪ್ರಸ್ತುತ ವರ್ಷದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳ ಉನ್ನತೀಕರಣಕ್ಕೆ ಸಂಬಂಧಿಸಿದಂತೆ 72 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳನ್ನು ಸರಕಾರಿ ಪ್ರೌಢ ಶಾಲೆಗಳನ್ನಾಗಿ ಉನ್ನತೀಕರಿಸಲು ಪರಿಶೀಲಿಸಲಾಗುತ್ತಿದೆ.

**ಶಿಕ್ಷಕರ ನೇಮಕಾತಿ ಕುರಿತು:-**

**ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ನೇಮಕಾತಿ ಕುರಿತು:-**

- 2021-22ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇದ್ದ ಪದವೀಧರ ಪ್ರಾಥಮಿಕ ಶಿಕ್ಷಕರು (6 ರಿಂದ 8ನೇ ತರಗತಿ) 15000 ಹುದ್ದೆಗಳ ನೇಮಕಾತಿಗಾಗಿ ದಿನಾಂಕ 21.03.2022 ರಂದು ಅಧಿಸೂಚಿಸಲಾಗಿತ್ತು. ಅದರಂತೆ ಈವರೆಗೆ ಒಟ್ಟು 12392 ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿರುತ್ತದೆ.
- ಸರ್ಕಾರದ ಆದೇಶ ಸಂಖ್ಯೆ: ಇಪಿ 230 ಪಿಬಿಎಸ್ 2024, ದಿನಾಂಕ:07.10.2024 ರನ್ವಯ ಕಲ್ಯಾಣ ಕರ್ನಾಟಕ ಪ್ರದೇಶದ 07 ಜಿಲ್ಲೆಗಳಲ್ಲಿ ಖಾಲಿಯಿರುವ ಪ್ರಾಥಮಿಕ ಶಾಲೆಗಳ 4882 ಹಾಗೂ ಪ್ರೌಢಶಾಲೆಗಳ 385 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ.
- ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸುತ್ತೋಲೆ ಸಂಖ್ಯೆ ಸಿಆಸುಇ 388 ಸೇನೆನಿ 2024, ದಿನಾಂಕ: 25.11.2024 ರಲ್ಲಿ ದಿನಾಂಕ 28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ನೇಮಕಾತಿ ಅಧಿಸೂಚನೆ ಹೊರಡಿಸಿರುವುದಿಲ್ಲ.
- ಮುಂದುವರೆದು, ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಪ್ರಾಥಮಿಕ ಶಾಲೆಗಳಿಗೆ 35000

ಮತ್ತು ಪ್ರೌಢ ಶಾಲೆಗಳಿಗೆ 9098 ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವ ಮೂಲಕ ಶಿಕ್ಷಕರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

**DSERT**

1. ಗುಣಮಟ್ಟದ ಶಿಕ್ಷಣ ಮತ್ತು ಗಣನೀಯ ಪ್ರಮಾಣದಲ್ಲಿ ಒದಗಿಸಿಕೊಡುತ್ತಿರುವ ಸೌಲಭ್ಯಗಳನ್ನು ಆಧರಿಸಿ ಹೆಚ್ಚಿನ ಸಂಖ್ಯಾ ಬಲವನ್ನು ಹೊಂದಲು ಅನುಸರಿಸುತ್ತಿರುವ ಕ್ರಮಗಳು ಈ ಕೆಳಕಂಡಂತಿವೆ.

2. 2024-25ನೇ ಸಾಲಿನಲ್ಲಿ ಆಯವ್ಯಯ ಘೋಷಿಕ ಕಂಡಿಕೆ 96(ಡಿ) ಅಡಿ 250 ಸರ್ಕಾರಿ ಪ್ರೌಢಶಾಲೆಗಳಲ್ಲಿ ವಿಜ್ಞಾನ ಪ್ರಯೋಗಾಲಯ ಸೌಲಭ್ಯವನ್ನು ಅನುಷ್ಠಾನಿಸಿ ಪ್ರಯೋಗಾಲಯ ನಿರ್ವಹಣೆ ಕುರಿತು ಪ್ರಯೋಗದರ್ಶಿ ಎಂಬ ಕೈಪಿಡಿಯನ್ನು ಸಿದ್ಧಪಡಿಸಿ ಸಂಬಂಧಿಸಿದ ಶಾಲೆಗಳ ವಿಜ್ಞಾನ ಶಿಕ್ಷಕರಿಗೆ ತರಬೇತಿ ನೀಡಲಾಗಿದೆ. ಈ ಮೂಲಕ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಹಾಗೂ ತಾರ್ಕಿಕ ಚಿಂತನಾ ಕೌಶಲಗಳು ವೃದ್ಧಿಯಾಗಲಿವೆ.

3. ಭಾರತ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ವತಿಯಿಂದ ನಡೆಸಲಾಗುವ INSPIRE Award ಎಂಬ ಕಾರ್ಯಕ್ರಮದಲ್ಲಿ ಗ್ರಾಮೀಣ ಭಾಗದ ಹೆಚ್ಚಿನ ವಿದ್ಯಾರ್ಥಿಗಳು ಭಾಗವಹಿಸುವಂತೆ ನಾವೀನ್ಯಯುತವಾದ ಹೊಸ ಅನ್ವೇಷಣೆಗಳನ್ನು ಕಂಡುಕೊಳ್ಳಲು ಮಾರ್ಗದರ್ಶನ ನೀಡಲಾಗುತ್ತಿದೆ. ಈ ಮೂಲಕ ವಿದ್ಯಾರ್ಥಿಗಳಲ್ಲಿ ಸ್ಥಳೀಯ ಗ್ರಾಮದಲ್ಲಿನ ಸಮಸ್ಯೆಗಳಿಗೆ ಪರಿಹಾರ ಕಂಡುಕೊಂಡು ಜೀವನಶೈಲಿ ಉತ್ತಮಪಡಿಸಿಕೊಳ್ಳಲು ಸಹಾಯಕವಾಗಿದೆ.

4. Go Green Seed Ball project ಕಾರ್ಯಕ್ರಮ ಮೂಲಕ ವಿದ್ಯಾರ್ಥಿಗಳಳು ಪರಿಸರ ಪ್ರಜ್ಞೆ ಹೊಂದಲು ಸಹಾಯಕವಾಗಿದೆ.

5. ತಂತ್ರಜ್ಞಾನ ಬೆಂಬಲಿತ ಕಲಿಕಾ ಕಾರ್ಯಕ್ರಮ (TALP)ವನ್ನು ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ 2016-17ರಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಕಾರ್ಯಕ್ರಮದಡಿ ಲ್ಯಾಪ್ ಟಾಪ್, ಪ್ರೊಜೆಕ್ಟರ್ ಮತ್ತು ಕಂಪ್ಯೂಟರ್ ಲ್ಯಾಬ್ ಒದಗಿಸಲಾಗಿದೆ. ಸದರಿ ಉಪಕರಣಗಳನ್ನು ಬಳಸಿಕೊಂಡು ಇ-ಸಂಪನ್ಮೂಲಗಳನ್ನು ಸೃಜಿಸಿ ತರಗತಿಗಳ ಬೋಧನಾ ಕಲಿಕಾ ಪ್ರಕ್ರಿಯೆ ಉತ್ತಮಪಡಿಸಲಾಗುತ್ತಿದೆ.

6. ಶಿಕ್ಷಕರು ಮತ್ತು ವಿದ್ಯಾರ್ಥಿಗಳಿಗೆ Digital Skill ಬಳಕೆ ಹಾಗೂ ಕಂಪ್ಯೂಟರ್ ಆಧಾರಿತ ಶಿಕ್ಷಣದ ಅಭಿವೃದ್ಧಿಗೆ ಸಂಬಂಧಿಸಿದಂತೆ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ತರಬೇತಿಯನ್ನು ನೀಡುವ ಮೂಲಕ ಗುಣಾತ್ಮಕ ಶಿಕ್ಷಣಕ್ಕೆ ಒತ್ತು ನೀಡಲಾಗಿದೆ.

7. ಟ್ಯಾಲ್ಪ್ ಯೋಜನೆಯಡಿ ತಂತ್ರಜ್ಞಾನ ಬಳಕೆಯ ಬಗ್ಗೆ 38632 ಶಿಕ್ಷಕರಿಗೆ ಇಂಡಕ್ಷನ್ ತರಬೇತಿಯನ್ನು ಹಾಗೂ 9644 ಶಿಕ್ಷಕರಿಗೆ ರಿಫ್ರೆಷರ್ ತರಬೇತಿಯನ್ನು ನೀಡಲಾಗಿದೆ.

8. 2024-25ನೇ ಸಾಲಿನಲ್ಲಿ ಸ್ವಯಂ ಸೇವಾ ಸಂಸ್ಥೆಯ ಸಹಕಾರದೊಂದಿಗೆ Artificial Intelligence ಬಳಸಿಕೊಂಡು ಆಯ್ದ ಸರ್ಕಾರಿ ಶಾಲೆಗಳಲ್ಲಿ 4 ಮತ್ತು 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ "ಕಲಿಕಾದೀಪ" ಕಾರ್ಯಕ್ರಮವನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಯೋಜಿಸಲಾಗಿದೆ.

9. ಸರ್ಕಾರಿ ಶಾಲೆಗಳ ಶಿಕ್ಷಕರಿಗೆ ಇ-ಕಂಟೆಂಟ್ ಅಭಿವೃದ್ಧಿಗೆ ಸಂಬಂಧಿಸಿದಂತೆ 1000 ಶಿಕ್ಷಕರಿಗೆ ತರಬೇತಿ ನೀಡಲಾಗಿದೆ. ಪ್ರತಿ

| | | |
|---|---|---|
| | | ಜಿಲ್ಲೆಯಿಂದ ತರಬೇತಿ ಪಡೆದ ಶಿಕ್ಷಕರು 75 ಇ-ಕಂಟೆಂಟ್ ಸೃಜನೆ ಮಾಡಿ ದೀಕ್ಷಾ ಪೋರ್ಟಲ್ ನಲ್ಲಿ ಅಪ್ ಲೋಡ್ ಮಾಡುವ ಕಾರ್ಯ ಪ್ರಗತಿಯಲ್ಲಿದೆ.<br>10. ಗ್ರಾಮೀಣ ಪ್ರದೇಶಗಳಲ್ಲಿರುವ ವಿದ್ಯಾರ್ಥಿಗಳೂ ಸಹ ದೀಕ್ಷಾ ಪೋರ್ಟಲ್ ನಲ್ಲಿ ಲಾಗಿನ್ ಆಗಿ ಹೆಚ್ಚು ವಿಷಯಾಧಾರಿತ ಸಂಪನ್ಮೂಲಗಳನ್ನು ಪಡೆದು ಜ್ಞಾನವನ್ನು ಹೆಚ್ಚಿಸಿಕೊಳ್ಳಬಹುದಾಗಿದೆ.<br>11. ಗ್ರಾಮೀಣ ಭಾಗದ ಶಾಲೆಗಳನ್ನು ಒಳಗೊಂಡಂತೆ ರಾಜ್ಯದ ಎಲ್ಲಾ ಶಾಲೆಗಳ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟವನ್ನು ಉತ್ತಮಪಡಿಸಲು ಬುನಾದಿ ಸಾಕ್ಷರತೆ & ಸಂಖ್ಯಾಜ್ಞಾನ ಉತ್ತಮ ಪಡಿಸಲು ಈ ಕೆಳಗಿನಂತೆ ಕ್ರಮ ಕೈಗೊಳ್ಳಲಾಗಿದೆ.<br>12. 2024-25ನೇ ಶೈಕ್ಷಣಿಕ ವರ್ಷ ಪ್ರಾರಂಭದಲ್ಲಿ ರಾಜ್ಯ ಮಟ್ಟದ FLN ವಿಚಾರಗೋಷ್ಠಿಯಲ್ಲಿ ತೆಗೆದುಕೊಂಡ ನಿರ್ಣಯಗಳು ಹಾಗೂ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡುವ ಸಂಬಂಧ ಸುತ್ತೋಲೆಯನ್ನು ಸಿದ್ಧಪಡಿಸಿ ಡಯಟ್ ಗಳ ಮುಖಾಂತರ ಅನುಷ್ಠಾನಾಧಿಕಾರಿಗಳು ಮತ್ತು ಶಾಲೆಗಳಿಗೆ ಕಳುಹಿಸಿಕೊಡಲಾಗಿದೆ.<br>13. 1 ರಿಂದ 3ನೇ ತರಗತಿಯ ಕಲಿಕಾಫಲಗಳನ್ನು ಆಧರಿಸಿ ಭಾಷೆ ಮತ್ತು ಗಣಿತಕ್ಕೆ ತಲಾ 10 ಕಲಿಕಾಫಲಗಳನ್ನು ನಿಗಧಿಪಡಿಸಿ 4 ರಿಂದ 10 ನೇ ತರಗತಿಯಲ್ಲಿ ಮಕ್ಕಳನ್ನು ಗುರುತಿಸಿ ಕಾರ್ಯಕ್ರಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ರಾಜ್ಯ, ಜಿಲ್ಲೆ, ಬ್ಲಾಕ್ ಮತ್ತು ಕ್ಲಸ್ಟರ್ ಹಂತದಲ್ಲಿ ಅನುಪಾಲನೆ ಮಾಡಲಾಗುತ್ತಿದೆ.<br>14. ಸದರಿ ಕಾರ್ಯಕ್ರಮದ ಅನುಷ್ಠಾನ ಸಂಬಂಧ ಎಲ್ಲಾ ಡಯಟ್‌ಗಳ ಮೂಲಕ ಭಾಷಾ ಮತ್ತು ಗಣಿತ ಮಾಸಾಚರಣೆಗಳನ್ನು ನಡೆಸಲಾಗುತ್ತಿದೆ<br>15. ಸರ್ಕಾರೇತರ ಸಂಸ್ಥೆಗಳಾದ (ಅಕ್ಷರ ಫೌಂಡೇಷನ್, ಪ್ರಥಮ್, ಮಂತ್ರ ಫಾರ್ ಚೇಂಜ್) ಸಹಕಾರದೊಂದಿಗೆ FLN ಸಾಧಿಸಲು ಚಟುವಟಿಕೆಗಳನ್ನು ಡಯಟ್‌ಗಳ ಹಂತದಲ್ಲಿ ಹಮ್ಮಿಕೊಳ್ಳಲಾಗಿದೆ.<br>16. ರಾಜ್ಯದ ಎಲ್ಲಾ ಗ್ರಾಮೀಣ ಮತ್ತು ನಗರ ಪ್ರದೇಶದ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು ವಿವಿಧ ತರಬೇತಿಗಳನ್ನು ಮುಖಾ ಮುಖಿ, ಆನ್ ಲೈನ್, ಯು ಟ್ಯೂಬ್ ಲೈವ್ ಮೂಲಕ ಶಿಕ್ಷಕರಿಗೆ ನೀಡಲಾಗುತ್ತಿದೆ.<br>17. ಉತ್ತಮ ಗುಣಮಟ್ಟದ ಶಿಕ್ಷಣವನ್ನು ಮಕ್ಕಳಿಗೆ ಒದಗಿಸಲು ಶಿಕ್ಷಕರಿಗೆ ವೃತ್ತಿಪರ ಬೆಳವಣಿಗೆಯ ತರಬೇತಿಗಳನ್ನು ಪ್ರತಿ ವರ್ಷ ನೀಡಲಾಗುತ್ತಿದೆ. ನಿಷ್ಠಾ ಆನ್‌ಲೈನ್ ತರಬೇತಿ, ಗುರುಚೇತನ ಮಾಡ್ಯೂಲ್‌ಗಳ ತರಬೇತಿ, ವಿಷಯವಾರು ಆನ್‌ಲೈನ್ ತರಬೇತಿ, ಪ್ರೌಢ ಶಾಲಾ ಶಿಕ್ಷಕರಿಗೆ ಗಣಿತ ಮತ್ತು ವಿಜ್ಞಾನ ವಿಷಯಕ್ಕೆ ಸಂಬಂಧಿಸಿದಂತೆ ಐಐಎಸ್‌ಸಿ ಚಳ್ಳಕೆರೆಯಲ್ಲಿ ತರಬೇತಿ ಹಾಗೂ ಇನ್ನಿತರೆ ತರಬೇತಿಗಳನ್ನು ಶಿಕ್ಷಕರಿಗೆ ನೀಡಲಾಗುತ್ತಿದೆ. 2024-25ನೇ ಸಾಲಿನಲ್ಲಿ ಮರುಸಿಂಚನ (6 ರಿಂದ 10ನೇ ತರಗತಿಗೆ) ತರಬೇತಿ, ಗಣಿತ ಗಣಕ ತರಬೇತಿ, ನಲಿ ಕಲಿ ತರಬೇತಿ, ವಿಷಯವಾರು ತರಬೇತಿ ಹಾಗೂ ಐಐಎಸ್‌ಸಿ ತರಬೇತಿ, ಸೇವಾ ನಿರತ ಶಿಕ್ಷಕರಿಗೆ Learning Outcome based achievement survey-tool preparation & workshop ತರಬೇತಿಯನ್ನು ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರಿಗೆ ನೀಡುತ್ತಿದ್ದು, ಇವು ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಮುಖಾಂತರ ವಿದ್ಯಾರ್ಥಿಗಳಿಗೆ ತಲುಪುತ್ತಿದೆ. ಇದು ಗುಣಮಟ್ಟದ ಹೆಚ್ಚಳಕ್ಕೆ |

| | | |
|---|---|---|
| | | ಸಹಾಯ ಮಾಡಲಾಗುತ್ತಿದೆ.<br>ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಜಿಲ್ಲಾ ಹಾಗೂ ರಾಜ್ಯ ಹಂತದಲ್ಲಿ ಮುಖಾ ಮುಖಿ ಹಾಗೂ ಆನ್‌ಲೈನ್, ಯು ಟ್ಯೂಬ್ ಲೈವ್ ಮೂಲಕ ವಿವಿಧ ಸಭೆಗಳನ್ನು, ಕಾರ್ಯಗಾರಗಳನ್ನು ನಡೆಸಿ ಮಾರ್ಗದರ್ಶನವನ್ನು ನೀಡಲಾಗಿದೆ.<br>**SSK**<br>ಕೇಂದ್ರ ಪುರಸ್ಕೃತ ಯೋಜನೆಯಾದ ಸಮಗ್ರ ಶಿಕ್ಷಣ-ಕರ್ನಾಟಕ ಯೋಜನೆಯಡಿ ನಗರ ಮತ್ತು ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಮಕ್ಕಳ ಹಾಜರಾತಿಗೆ ಅನುಗುಣವಾಗಿ ಅವಶ್ಯವಿರುವ ಮೂಲಭೂತ ಸೌಕರ್ಯಗಳಾದ ಕೊಠಡಿ ನಿರ್ಮಾಣ, ಶೌಚಾಲಯ ನಿರ್ಮಾಣ, ಕುಡಿಯುವ ನೀರಿನ ಸೌಲಭ್ಯ, CWSN ಶೌಚಾಲಯ, ಕೊಠಡಿಗಳ ದುರಸ್ಥಿ, ಹೆಣ್ಣು ಮಕ್ಕಳಿಗೆ ಹಾಸ್ಟೆಲ್‌ಗಳ ನಿರ್ಮಾಣ ಮುಂತಾದವುಗಳ ಬಗ್ಗೆ ಸಂಬಂಧಪಟ್ಟ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳನ್ನು ಆಧರಿಸಿ ಮಂಜೂರಾದ/ ಅನುಮೋದನೆಯಾದ ಕಾಮಗಾರಿಗಳಿಗೆ ಆಯಾ ಸಾಲಿನಲ್ಲಿ ಬಿಡುಗಡೆ ಆಗುವ ಅನುದಾನಕ್ಕೆ ಸೀಮಿತಗೊಳಿಸಿ ಕಾಮಗಾರಿಗಳನ್ನು ಕೈಗೊಳ್ಳಲು ಯೋಜಿಸಲಾಗುತ್ತಿದೆ.<br>**PRO**<br>CSR ಒಳಗೊಂಡಿರುವ ಕಂಪನಿಗಳು ಮತ್ತು ನಾಗರಿಕ ಸಮಾಜ ಸಂಸ್ಥೆಗಳು ಸೇರಿದಂತೆ ವಿವಿಧ ಪಾಲುದಾರಿಕೆಯ ಮೂಲಕ ಖಾಸಗಿ ಸಂಸ್ಥೆಗಳ ಸಹಯೋಗದೊಂದಿಗೆ ರಾಜ್ಯದಲ್ಲಿ 2000 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಆರಂಭಿಸಲು ಯೋಜಿಸಿದ್ದು, ಪ್ರಾರಂಭಿಕವಾಗಿ 500 ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭಿಸಲು ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಮೇಲುಸ್ತುವಾರಿ ಸಮಿತಿಯನ್ನು ರಚಿಸಿ ಸರ್ಕಾರವು ಸರ್ಕಾರಿ ಆದೇಶ ಸಂಖ್ಯೆ:ಇಪಿ 07 ಎಂಪಿಇ 2024, ಬೆಂಗಳೂರು ದಿನಾಂಕ:18.01.2024ರಲ್ಲಿ ಆದೇಶ ಹೊರಡಿಸಿದೆ. ಹೊಸ ಕೆ.ಪಿ.ಎಸ್ ಶಾಲೆಗಳ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ) | 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪ್ರಾಥಮಿಕ ಶಾಲೆಗಳನ್ನು ಅಭಿವೃದ್ಧಿ ಪಡಿಸಲಾಗಿದೆಯೇ; | ಸನ್ಮಾನ್ಯ ಮುಖ್ಯ ಮಂತ್ರಿಗಳು 2024-25ನೇ ಸಾಲಿನ (ಫೆಬ್ರುವರಿ ಆಯವ್ಯಯ ಭಾಷಣದ ಕಂಡಿಕೆ-96(5)ರಲ್ಲಿ ರಾಜ್ಯದಲ್ಲಿ ಎರಡು ಸಾವಿರ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ/ಇತರೆ ಮಾಧ್ಯಮದ ಜೊತೆಗೆ ಆಂಗ್ಲ ಮಾಧ್ಯಮ (ದ್ವಿ-ಭಾಷಾ ಮಾಧ್ಯಮ ತರಗತಿಗಳನ್ನು) ಪ್ರಾರಂಭಿಸಲು ಘೋಷಿಸಿದ್ದು ಅದರಂತೆ 1792 ಶಾಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ. |
| ಇ | ಕಳೆದ ಒಂದು ವರ್ಷದಲ್ಲಿ ಎಷ್ಟು ಪ್ರಾಥಮಿಕ ಶಾಲೆಗಳನ್ನು ಅಭಿವೃದ್ಧಿಪಡಿಸಲಾಗಿದೆ? (ಮಾಹಿತಿ ಒದಗಿಸುವುದು) | • 1792 (1419+373) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ/ಇತರೆ ಮಾಧ್ಯಮದ ಜೊತೆಗೆ ಆಂಗ್ಲ ಮಾಧ್ಯಮ (ದ್ವಿ-ಭಾಷಾ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲಾಗಿದೆ. (ಮಾಹಿತಿಯನ್ನು **ಅನುಬಂಧ-1**ರಲ್ಲಿ ಒದಗಿಸಿದೆ)<br>• 2024-25ನೇ ಸಾಲಿನಲ್ಲಿ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ 59 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಮತ್ತು 91 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 7ನೇ ತರಗತಿಯನ್ನು, 8ನೇ ತರಗತಿಯನ್ನಾಗಿ ಉನ್ನತೀಕರಿಸಲಾಗಿದೆ. (ಮಾಹಿತಿಯನ್ನು **ಅನುಬಂಧ-2**ರಲ್ಲಿ ಒದಗಿಸಿದೆ). |

| | | |
|---|---|---|
| | | • 2024-25ನೇ ಸಾಲಿನಲ್ಲಿ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ 25 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 1ನೇ ತರಗತಿಯಿಂದ ದ್ವಿ-ಭಾಷಾ ಮಾಧ್ಯಮದ ಹೆಚ್ಚುವರಿ ಮತ್ತೊಂದು ಆಂಗ್ಲ ಮಾಧ್ಯಮದ ತರಗತಿಯ ವಿಭಾಗ ಪ್ರಾರಂಭಿಸಲಾಗಿದೆ.<br>• ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ 2024-25 ಸಾಲಿನಲ್ಲಿ 200 ಪ್ರಾಥಮಿಕ ಶಾಲೆಗಳ ವಿದ್ಯುಚ್ಛಕ್ತಿಗಾಗಿ ರೂ.80.00ಲಕ್ಷಗಳ ಅನುದಾನ ಬಿಡುಗಡೆಗೊಳಿಸಲಾಗಿದೆ ಹಾಗೂ 79 ಪ್ರಾಥಮಿಕ ಶಾಲೆಗಳ ದುರಸ್ತಿಗಾಗಿ ರೂ.793.95 ಲಕ್ಷಗಳ ಅನುದಾನ ಮಂಜೂರಾಗಿದ್ದು ರೂ.595.46 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. |

**ಇಪಿ 86 ಯೋಸಕ 2025**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

ಅನುಬಂಧ-1

(1)

**ಕರ್ನಾಟಕ ಸರ್ಕಾರದ ನಡವಳಿಗಳು**

***ವಿಷಯ:*** 2024-25ನೇ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ/ ಇತರೆ ಮಾಧ್ಯಮದ ಜೊತೆ ಆಂಗ್ಲ ಮಾಧ್ಯಮ (ದ್ವಿಭಾಷಾ) ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

***ಓದಲಾಗಿದೆ:***

1. 2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ (96).
2. ಸರ್ಕಾರದ ಆದೇಶ ಸಂಖ್ಯೆ: ಇಡಿ 109 ಯೋಯೋಕ 2018, ದಿನಾಂಕ : 15.08.2019
3. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಇವರ ಏಕ ಕಡತ ಸಂಖ್ಯೆ: ಎಡಿಎಂ 2 (4) ಹೊ.ಶಾ.ಮ.01 / 2024-25.

ಆಯುಕ್ತರು | 24
ಶಾಲಾ ಶಿಕ್ಷಣ ಇಲಾಖೆ,
ಬೆಂಗಳೂರು-560 001
DPI, P

* * *

***ಪ್ರಸ್ತಾವನೆ:***

ಮೇಲೆ ಓದಲಾದ ಕ್ರಮಾಂಕ (1)ರ 2024-25ನೇ ಸಾಲಿನ (ಫೆಬ್ರುವರಿ) ಆಯವ್ಯಯ ಭಾಷಣದ ಕಂಡಿಕೆ 96(5)ರಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಕಂಡಂತೆ ಘೋಷಿಸಿರುತ್ತಾರೆ.

> "2000 ಸರ್ಕಾರಿ ಪ್ರಥಮಿಕ ಶಾಲೆಗಳನ್ನು ದ್ವಿಭಾಷಾ ಮಾಧ್ಯಮ (ಕನ್ನಡ ಮತ್ತು ಇಂಗ್ಲೀಷ್) ಶಾಲೆಗಳಾಗಿ ಪರಿವರ್ತಿಸಲಾಗುವುದು "

ಮೇಲೆ ಓದಲಾದ ಕ್ರಮಾಂಕ (2)ರ ಸರ್ಕಾರದ ಆದೇಶದಲ್ಲಿ ರಾಜ್ಯದ 1000 ಸರ್ಕಾರಿ ಶಾಲೆಗಳಲ್ಲಿ 2019-20ನೇ ಸಾಲಿನಿಂದ 1ನೇ ತರಗತಿಯಿಂದ ಹಾಲಿ ಇರುವ ಕನ್ನಡ ಮಾಧ್ಯಮದ ಜೊತೆ ಆಂಗ್ಲ ಮಾಧ್ಯಮ (ದ್ವಿಭಾಷಾ ಮಾಧ್ಯಮ) ತರಗತಿಯನ್ನು ಕೆಲವು ಷರತ್ತುಗಳೊಂದಿಗೆ ಪ್ರಾರಂಭಿಸಲು ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3)ರ ಏಕ ಕಡತದಲ್ಲಿ ಸರ್ಕಾರಿ ಶಾಲೆಗಳ ಶೈಕ್ಷಣಿಕ ಬಲವರ್ಧನೆಗಾಗಿ ಹಾಲಿ ನಡೆಯುತ್ತಿರುವ ಪ್ರಾಥಮಿಕ ಶಾಲೆಗಳಿಗೆ ಅಗತ್ಯಾನುಸಾರ 1ನೇ ತರಗತಿಯಿಂದ ಹೊಸದಾಗಿ ಆಂಗ್ಲ ಮಾಧ್ಯಮ (ದ್ವಿಭಾಷ ಮಾಧ್ಯಮ) ಪ್ರಾರಂಭಿಸಲು ಈ ಹಿಂದೆ ನಿಗದಿಡಿಸಿದ ಮಾನದಂಡಗಳಂತೆ ಪ್ರಸ್ತಾವನೆ ಪಡೆದು ತಾಲ್ಲೂಕು / ಜಿಲ್ಲಾ / ವಿಭಾಗ ಹಂತದಲ್ಲಿ ಪರಿಶೀಲನಾ ಸಮಿತಿಗಳು ಪರಿಶೀಲಿಸಿ ಶಿಫಾರಸ್ಸು ಮಾಡಲು ಚೆಕ್ ಲಿಸ್ಟನೊಂದಿಗೆ ವೇಳಾ ಪಟ್ಟಿ ನಿಗದಿಪಡಿಸಿ ಸುತ್ತೋಲೆ ಮೂಲಕ ಸೂಚಿಸಿದ್ದು, ಆದರಂತೆ ಸ್ವೀಕೃತವಾಗಿರುವ ಪ್ರಸ್ತಾವನೆಗಳನ್ನು ಪರಿಶೀಲಿಸಿ ಒಟ್ಟು 1419 ಶಾಲೆಗಳಲ್ಲಿ 2024-25ನೇ ಸಾಲಿನಿಂದ ಸರ್ಕಾರಿ

ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ/ ಇತರೆ ಮಾಧ್ಯಮದ ಜೊತೆ ಆಂಗ್ಲ ಮಾಧ್ಯಮ (ದ್ವಿಭಾಷಾ) ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 137 ಪಿಜಿಸಿ 2024,**

**ಬೆಂಗಳೂರು, ದಿನಾಂಕ: 15 ನೇ ಜೂನ್ 2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಈ ಆದೇಶದ ಅನುಬಂಧದಲ್ಲಿನ ರಾಜ್ಯದ 1419 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 2024-25ನೇ ಸಾಲಿನಿಂದ 1ನೇ ತರಗತಿಯಿಂದ ಹಾಲಿ ನಡೆಯುತ್ತಿರುವ ಕನ್ನಡ/ಇತರೆ ಮಾಧ್ಯಮದ ಜೊತೆಗೆ ಹೊಸದಾಗಿ ಆಂಗ್ಲ ಮಾಧ್ಯಮ (ದ್ವಿಭಾಷಾ ಮಾಧ್ಯಮ) ತರಗತಿಗಳನ್ನು ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಪ್ರಾರಂಭಿಸಲು ಸರ್ಕಾರದ ಆದೇಶ ಸಂಖ್ಯೆ :ಇಡಿ 109 ಯೋಯೋಕ 2018, ದಿನಾಂಕ:18.05.2019 ರಲ್ಲಿನ ಷರತ್ತುಗಳಿಗೊಳಪಟ್ಟು ಅನುಮತಿ ನೀಡಿ ಆದೇಶಿಸಿದೆ.

ಸದರಿ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: PDS-MED/59/2024, ದಿನಾಂಕ:03.06.2024 ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 399 ವೆಚ್ಚ-8/2024, ದಿನಾಂಕ:10.06.2024ರನ್ವಯ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

15/6/2024

**(ಮಹಾಂತಯ್ಯ ಎಸ್. ಹೊಸಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ ,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,
(ಪ್ರಾಥಮಿಕ)

**ಇವರಿಗೆ:**

1. ಮಹಾಲೇಖಪಾಲರು [ಆ & ಇ], ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ (ವೆಚ್ಚ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

ಸರ್ಕಾರದ ಆದೇಶ ಸಂಖ್ಯೆ: ಇಪಿ 137 ಪಿಜಿಸಿ 2024, ದಿನಾಂಕ: 15ನೇ ಜೂನ್ 2024ಕ್ಕೆ ಅನುಬಂಧ

District wise abstract for Class I Bilingual Section in Government Schools for the year 2024-25

| Sl.No. | District | No.of Schools | No.of Schools with above75enrollment |
|---|---|---|---|
| 1 | BangaloreRural | 60 | 40 |
| 2 | BangaloreSouth | 33 | 29 |
| 3 | BangaloreNorth | 33 | 32 |
| 4 | Chickkaballapur | 19 | 13 |
| 5 | Chitradurga | 85 | 74 |
| 6 | Davanagere | 33 | 30 |
| 7 | Kolar | 14 | 8 |
| 8 | Ramangara | 18 | 13 |
| 9 | Shivamogga | 55 | 40 |
| 10 | Tumkur | 24 | 12 |
| 11 | Madhugiri | 6 | 6 |
| 12 | Chamarajanagar | 8 | 6 |
| 13 | Chickkamagalur | 16 | 13 |
| 14 | DakshinaKannada | 43 | 30 |
| 15 | Hasan | 26 | 3 |
| 16 | Kodagu | 4 | 3 |
| 17 | Mandya | 27 | 18 |
| 18 | Mysore | 38 | 31 |
| 19 | Udupi | 51 | 36 |
| 20 | UttaraKannada | 41 | 19 |
| 21 | Bagalkote | 16 | 15 |
| 22 | Belagavi | 11 | 11 |
| 23 | Chikkodi | 7 | 7 |
| 24 | Dharwad | 15 | 15 |
| 25 | Gadag | 27 | 22 |
| 26 | Haveri | 3 | 3 |
| 27 | Sirsi | 12 | 9 |
| 28 | Vijayapura | 9 | 9 |
| 29 | Bellari | 124 | 119 |
| 30 | Bidar | 105 | 97 |
| 31 | Kalburgi | 163 | 165 |
| 32 | Koppal | 130 | 109 |
| 33 | Raichur | 179 | 176 |
| 34 | Vijayanagara | 153 | 134 |
| 35 | Yadgir | 84 | 72 |
| | **Total** | **1672** | **1419** |

ಕರ್ನಾಟಕ ಸರ್ಕಾರ

**ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ : ಎಡಿಎಂ2(4)ಹೊ.ಶಾ.ಮ.ವಿ.ಪ್ರಾ 01/2024 ದಿನಾಂಕ:05.09.2024

## ಜ್ಞಾಪನ

**ವಿಷಯ**: ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 2024-25ನೇ ಸಾಲಿನಿಂದ ಹಾಲಿ ಇರುವ ಕನ್ನಡ /ಇತರೆ ಮಾಧ್ಯಮದ ಜೊತೆಗೆ ಆಂಗ್ಲ [ದ್ವಿಭಾಷಾ (Bilingual)]ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡಿರುವ ಕುರಿತು.

**ಉಲ್ಲೇಖ**:1.ಸರ್ಕಾರದ ಆದೇಶ ಸಂಖ್ಯೆ: ಇಪಿ 137 ಪಿಜಿಸಿ 2024 ದಿನಾಂಕ: 15.06.2024
2. ಈ ಕಛೇರಿ ಏಕಕಡತ ಸಂಖ್ಯೆ 1475438 ರಲ್ಲಿ ಸರ್ಕಾರದ ಅನುಮೋದನೆಗೆ ಕೋರಿ ಸಲ್ಲಿಸಿದ ಪ್ರಸ್ತಾವನೆಯನುಸಾರ
3.ಸರ್ಕಾರದ ಆದೇಶ ಸಂಖ್ಯೆ: ಇಪಿ 137 ಪಿಜಿಸಿ 2024 ದಿನಾಂಕ: 03.09.2024.

******

ವಿಷಯಾನ್ವಯವಾಗಿ ರಾಜ್ಯದ ಸನ್ಮಾನ್ಯ ಮುಖ್ಯ ಮಂತ್ರಿಗಳು 2024-25ನೇ ಸಾಲಿನ (ಫೆಬ್ರವರಿ) ಆಯವ್ಯಯ ಭಾಷಣದ ಕಂಡಿಕೆ-96 (5)ರಲ್ಲಿ ರಾಜ್ಯದಲ್ಲಿ 2000 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ/ಇತರೆ ಮಾಧ್ಯಮದ ಜೊತೆಗೆ ಆಂಗ್ಲ ಮಾಧ್ಯಮ (ದ್ವಿಭಾಷಾ) ಶಾಲೆಗಳನ್ನು ಪ್ರಾರಂಭಿಸಲು ಘೋಷಿಸಿದ ಹಿನ್ನಲೆಯಲ್ಲಿ ಸರ್ಕಾರವು ಉಲ್ಲೇಖ-1ರನ್ವಯ ಮೊದಲನೇ ಹಂತದಲ್ಲಿ 1419 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ/ಇತರೆ ಮಾಧ್ಯಮದ ಜೊತೆಯಲ್ಲಿ ದ್ವಿಭಾಷಾ ಮಾಧ್ಯಮ ಶಾಲೆಗಳನ್ನು ಪ್ರಾರಂಭಿಸಲು ಅನುಮತಿಸಿ ಆದೇಶಿಸಿರುತ್ತದೆ. ಅದರಂತೆ ಈಗಾಗಲೇ ರಾಜ್ಯದ್ಯಂತ 1419 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ದ್ವಿಭಾಷಾ ಮಾಧ್ಯಮ ಶಾಲೆಗಳನ್ನು ಪ್ರಾರಂಭಿಸಿ ಅನುಷ್ಠಾನಗೊಳಿಸಲಾಗಿರುತ್ತದೆ.

ಪ್ರಸ್ತುತ ಎರಡನೇ ಹಂತದಲ್ಲಿ ರಾಜ್ಯಾದ್ಯಂತ 373 ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಗುರುತಿಸಿ ಒಂದನೇ ತರಗತಿಯಿಂದ ಹಾಲಿ ನಡೆಯುತ್ತಿರುವ ಕನ್ನಡ / ಇತರೆ ಮಾಧ್ಯಮದ ಜೊತೆಗೆ ಹೊಸದಾಗಿ ಆಂಗ್ಲ [ದ್ವಿಭಾಷಾ (Bilingual)) ಮಾಧ್ಯಮ ತರಗತಿಗಳನ್ನು ಪ್ರಾರಂಭಿಸುವ ಸಂಬಂಧ ಉಲ್ಲೇಖ-2ರನ್ವಯ ಏಕಕಡತದ ಮೂಲಕ ಸರ್ಕಾರದ ಅನುಮೋದನೆ ಕೋರಲಾಗಿರುತ್ತದೆ.

ಅದರಂತೆ ಸರ್ಕಾರವು 2024-25ನೇ ಸಾಲಿನಿಂದ ಉಲ್ಲೇಖಿತ-3ರ ಆದೇಶದ ಅನುಬಂಧದಲ್ಲಿನ 373 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 1 ನೇ ತರಗತಿಯಿಂದ ಹಾಲಿ ನಡೆಯುತ್ತಿರುವ ಕನ್ನಡ / ಇತರೆ ಮಾಧ್ಯಮದ ಜೊತೆಗೆ ಹೊಸದಾಗಿ ಆಂಗ್ಲ [ದ್ವಿಭಾಷಾ (Bilingual)) ಮಾಧ್ಯಮ ತರಗತಿಗಳನ್ನು ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಪ್ರಾರಂಭಿಸಲು ಸರ್ಕಾರದ ಆದೇಶ ಸಂಖ್ಯೆ: ಇಡಿ 109 ಯೋಯೋಕ 2018 ದಿನಾಂಕ: 18.05.2019 ರಲ್ಲಿನ ಷರತ್ತುಗಳಿಗೊಳಪಟ್ಟು ಅನುಮತಿಸಿ ಆದೇಶಿಸಲಾಗಿರುತ್ತದೆ. (ಪ್ರತಿಗಳನ್ನು ಲಗತ್ತಿಸಿದೆ)

ಸದರಿ ಆದೇಶದಲ್ಲಿನ ಅಂಶಗಳನ್ವಯ ಸಮರ್ಪಕವಾಗಿ ಅನುಷ್ಠಾನಗೊಳಿಸಲು ಕೂಡಲೇ ನಿಯಮಾನುಸಾರ ಅಗತ್ಯ ಕ್ರಮಗಳನ್ನು ವಹಿಸುವಂತೆ ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ಈ ಮೂಲಕ ತಿಳಿಸಲಾಗಿದೆ.

(ಬಿ.ಬಿ. ಕಾವೇರಿ, ಭಾ.ಆ.ಸೇ.)
ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ

**ಇವರಿಗೆ,**

1. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ-ಕರ್ನಾಟಕ, ಬೆಂಗಳೂರು-1
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ / ಕಲಬುರಗಿ ವಿಭಾಗ
3. ನಿರ್ದೇಶಕರು, ಪ್ರಧಾನ ಮಂತ್ರಿ ಪೋಷಣ್ ಶಕ್ತಿ ಅಭಿಯಾನ್ (ಮಧ್ಯಾಹ್ನ ಉಪಹಾರ ಯೋಜನೆ ), ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಕೆ.ಆರ್ ವೃತ್ತ, ಬೆಂಗಳೂರು -1
4. ನಿರ್ದೇಶಕರು (ಪ್ರೌಢ ಶಿಕ್ಷಣ), ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಕೆ.ಆರ್ ವೃತ್ತ, ಬೆಂಗಳೂರು-1.

5. ನಿರ್ದೇಶಕರು, ಉರ್ದು ಮತ್ತು ಇತರ ಅಲ್ಪ ಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ, ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಕೆ.ಆರ್ ವೃತ್ತ ಬೆಂಗಳೂರು-1.
6. ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ(ಡಿ.ಎಸ್.ಇ.ಆರ್.ಟಿ), 100ಅಡಿ ರಿಂಗ್ ರಸ್ತೆ, ಹೊಸಕೆರೆ ಹಳ್ಳಿ ಕ್ರಾಸ್, ಬನಶಂಕರಿ, ಬೆಂಗಳೂರು-85,
7. ನಿರ್ದೇಶಕರು, ಪ್ರಾದೇಶಿಕ ಆಂಗ್ಲ ಭಾಷಾ ತರಬೇತಿ ಸಂಸ್ಥೆ(ಆರ್.ಐ.ಇ), ಜ್ಞಾನ ಭಾರತಿ ಆವರಣ, ಬೆಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ (ರಿ),ಮಲ್ಲೇಶ್ವರಂ, ಬೆಂಗಳೂರು.
9. ಉಪನಿರ್ದೇಶಕರು, ಯೋಜನೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಕೆ.ಆರ್ ವೃತ್ತ..ಬೆಂಗಳೂರು
10.ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ
11.ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ರವರಿಗೆ [ ಆಯಾ ಉಪನಿರ್ದೇಶಕರು (ಆಡಳಿತ) ರವರ ಮೂಲಕ) ಅಗತ್ಯ ಕ್ರಮಕ್ಕಾಗಿ
12. ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರಿಗೆ (ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ) ಅಗತ್ಯ ಕ್ರಮಕ್ಕಾಗಿ

**ಪ್ರತಿಯನ್ನು ಮಾಹಿತಿಗಾಗಿ,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1
2. ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಗಳು(ವೆಚ್ಚ), ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು-1
4. ಆಯುಕ್ತರು / ನಿರ್ದೇಶಕರು, ಖಜಾನೆ ಇಲಾಖೆ, ಕೆ.ಪಿ.ಟಿ.ಸಿ.ಎಲ್ ಕಟ್ಟಡ, ಅರಮನೆ ರಸ್ತೆ, ಬೆಂಗಳೂರು-1
5. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು ಇವರಿಗೆ ಕಳುಹಿಸುತ್ತಾ ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ಕೋರಿದೆ:
6. ಕಛೇರಿ ಪ್ರತಿ.

# ಕರ್ನಾಟಕ ಸರ್ಕಾರದ ನಡವಳಿಗಳು

***ವಿಷಯ:*** 2024-25ನೇ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಹಾಲಿ ಇರುವ ಕನ್ನಡ/ ಇತರೆ ಮಾಧ್ಯಮದ ಜೊತೆ ಆಂಗ್ಲ ಮಾಧ್ಯಮ (ದ್ವಿಭಾಷಾ) ತರಗತಿಗಳನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

***ಓದಲಾಗಿದೆ:***

1. ಸರ್ಕಾರದ ಆದೇಶ ಸಂಖ್ಯೆ: ಇಡಿ 109 ಯೋಯೋಕ 2018, ದಿನಾಂಕ : 15.08.2019.
2. ಸರ್ಕಾರದ ಆದೇಶ ಸಂಖ್ಯೆ:ಇಪಿ 137 ಪಿಜಿಸಿ 2024, ದಿನಾಂಕ:15.06.2024.
3. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಇವರ ಏಕ ಕಡತ ಸಂಖ್ಯೆ: **DPI-CPI0ADM2(OTH)/206/2024.**

* * *

***ಪ್ರಸ್ತಾವನೆ:***

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರದ ಆದೇಶದಲ್ಲಿ ರಾಜ್ಯದ 1000 ಸರ್ಕಾರಿ ಶಾಲೆಗಳಲ್ಲಿ 2019-20ನೇ ಸಾಲಿನಿಂದ 1ನೇ ತರಗತಿಯಿಂದ ಹಾಲಿ ಇರುವ ಕನ್ನಡ ಮಾಧ್ಯಮದ ಜೊತೆ ಆಂಗ್ಲ ಮಾಧ್ಯಮ (ದ್ವಿಭಾಷಾ ಮಾಧ್ಯಮ) ತರಗತಿಯನ್ನು ಕೆಲವು ಷರತ್ತುಗಳೊಂದಿಗೆ ಪ್ರಾರಂಭಿಸಲು ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2)ರ ಸರ್ಕಾರದ ಆದೇಶದಲ್ಲಿ 2024-25ನೇ ಸಾಲಿನ (ಫೆಬ್ರುವರಿ) ಆಯವ್ಯಯ ಭಾಷಣದ ಕಂಡಿಕೆ 96(5)ರಲ್ಲಿ "2000 ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ದ್ವಿಭಾಷಾ ಮಾಧ್ಯಮ (ಕನ್ನಡ ಮತ್ತು ಇಂಗ್ಲೀಷ್) ಶಾಲೆಗಳಾಗಿ ಪರಿವರ್ತಿಸಲಾಗುವುದು" ಎಂದು ಘೋಷಿಸಲಾಗಿದ್ದು, ಅದರಂತೆ ರಾಜ್ಯದ 1419 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 2024-25ನೇ ಸಾಲಿನಿಂದ 1ನೇ ತರಗತಿಯಿಂದ ಹಾಲಿ ನಡೆಯುತ್ತಿರುವ ಕನ್ನಡ/ಇತರೆ ಮಾಧ್ಯಮದ ಜೊತೆಗೆ ಹೊಸದಾಗಿ ಆಂಗ್ಲ ಮಾಧ್ಯಮ (ದ್ವಿಭಾಷಾ ಮಾಧ್ಯಮ) ತರಗತಿಗಳನ್ನು ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಪ್ರಾರಂಭಿಸಲು ಸರ್ಕಾರದ ಆದೇಶ ಸಂಖ್ಯೆ:ಇಡಿ 109 ಯೋಯೋಕ 2018, ದಿನಾಂಕ:18.05.2019 ರಲ್ಲಿನ ಷರತ್ತುಗಳಿಗೊಳಪಟ್ಟು ಅನುಮತಿ ನೀಡಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮಾಂಕ (3)ರ ಏಕ ಕಡತದಲ್ಲಿ ಜನಪ್ರತಿನಿಧಿಗಳಿಂದ, ಪೋಷಕರಿಂದ, ಶಾಲಾ ಅಭಿವೃದ್ಧಿ ಸಮಿತಿಗಳಿಂದ ಹಾಗೂ

ಅಧಿಕಾರಿಗಳಿಂದ ದ್ವಿಭಾಷಾ ಮಾಧ್ಯಮ ಪ್ರಾರಂಭಿಸುವಂತೆ ಮನವಿಗಳು ಸ್ವೀಕೃತವಾಗಿದ್ದು, ಅವುಗಳನ್ನು ಪರಿಶೀಲಿಸಿ ಪ್ರಸ್ತುತ 1ನೇ ತರಗತಿಯಲ್ಲಿ 16 ಮಕ್ಕಳಿಗಿಂತ ಹೆಚ್ಚಿರುವ ಹಾಗೂ ಒಟ್ಟಾರೆ ದಾಖಲಾತಿ 100 ಇರುವ ಮಾನದಂಡ ಅನುಸರಿಸಿ ಒಟ್ಟು 373 ಶಾಲೆಗಳನ್ನು ಆಯ್ಕೆ ಮಾಡಲಾಗಿದ್ದು, ಸದರಿ 373 ಶಾಲೆಗಳಿಗೆ ದ್ವಿ ಭಾಷಾ ಮಾಧ್ಯಮ ತರಗತಿಗಳನ್ನು ಯಾವುದೇ ಆರ್ಥಿಕ ಹೊರೆ ಇಲ್ಲದಂತೆ ಷರತ್ತು ಬದ್ಧವಾಗಿ ಪ್ರಾರಂಭಿಸಲು ಸರ್ಕಾರದ ಅನುಮೋದನೆ ಕೋರಿರುತ್ತಾರೆ.

ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಪಿ 137 ಪಿಜಿಸಿ 2024,**
**ಬೆಂಗಳೂರು, ದಿನಾಂಕ: 03ನೇ ಸೆಪ್ಟೆಂಬರ್ 2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಈ ಆದೇಶದ ಅನುಬಂಧದಲ್ಲಿನ ರಾಜ್ಯದ 373 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 2024-25ನೇ ಸಾಲಿನಿಂದ 1ನೇ ತರಗತಿಯಿಂದ ಹಾಲಿ ನಡೆಯುತ್ತಿರುವ ಕನ್ನಡ/ಇತರ ಮಾಧ್ಯಮದ ಜೊತೆಗೆ ಹೊಸದಾಗಿ ಆಂಗ್ಲ ಮಾಧ್ಯಮ (ದ್ವಿಭಾಷಾ ಮಾಧ್ಯಮ) ತರಗತಿಗಳನ್ನು ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಪ್ರಾರಂಭಿಸಲು ಸರ್ಕಾರದ ಆದೇಶ ಸಂಖ್ಯೆ:ಇಡಿ 109 ಯೋಯೋಕ 2018, ದಿನಾಂಕ:18.05.2019 ರಲ್ಲಿನ ಷರತ್ತುಗಳಿಗೊಳಪಟ್ಟು ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
3/9/2024
**(ಮಹಾಂತಯ್ಯ ಎಸ್. ಹೊಸಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ ,
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ,
(ಪ್ರಾಥಮಿಕ)

**ಇವರಿಗೆ:**

1. ಮಹಾಲೇಖಪಾಲರು [ಅ & ಇ], ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ (ವೆಚ್ಚ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
4. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.

ಅನುಬಂಧ -2 2

ಕರ್ನಾಟಕ ಸರ್ಕಾರ

**ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ ನೃಪತುಂಗ ರಸ್ತೆ, ಬೆಂಗಳೂರು-1**

ಸಂಖ್ಯೆ: ಎಡಿಎಂ-2(4) ಕಿ.ಪ್ರಾ.ಶಾ.ಉ 01/2023-24 ದಿನಾಂಕ: 22-07-2024

## ಜ್ಞಾಪನ

**ವಿಷಯ:** 2024-25ನೇ ಸಾಲಿಗೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ (6-7/8ನೇ ತರಗತಿ) ಶಾಲೆಗಳನ್ನಾಗಿ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿನ 7ನೇ ತರಗತಿಯನ್ನು 8ನೇ ತರಗತಿಯಾಗಿ ಉನ್ನತೀಕರಿಸಿ ಪ್ರಾರಂಭಿಸುವ ಬಗ್ಗೆ.

**ಉಲ್ಲೇಖ:** 1. ಈ ಕಛೇರಿ ಸುತ್ತೋಲೆ ಪತ್ರ ಸಂಖ್ಯೆ ಎಡಿಎಂ-2(4)ಹೊ.ಶಾ.ಮ.ವಿ.ಪ್ರಾ 1/2023-24 ದಿನಾಂಕ: 12-02-2024 & ದಿನಾಂಕ: 11.03.2024

2. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) & (ಅಭಿವೃದ್ಧಿ) ರವರುಗಳಿಂದ ಹಾಗೂ ಅಪರ ಆಯುಕ್ತರು ಧಾರವಾಡ/ಕಲಬುರುಗಿ ರವರುಗಳಿಂದ ಸ್ವೀಕೃತವಾಗಿರುವ ಪ್ರಸ್ತಾವನೆಗಳನುಸಾರ
3. ಏಕ ಕಡತದಲ್ಲಿ ದಿನಾಂಕ:10.06.2024ರಂದು ಸರ್ಕಾರವು ನೀಡಿರುವ ಅನುಮೋದನೆಯನುಸಾರ
4. ಜನಪ್ರತಿನಿಧಿಗಗಳು, ಶಾಸಕರು, ಸಚಿವರು , ಮತ್ತು ಉಪನಿರ್ದೇಶಕರು (ಆಡಳಿತ) & (ಅಭಿವೃದ್ಧಿ) ರವರುಗಳಿಂದ ಹಾಗೂ ಅಪರ ಆಯುಕ್ತರು ಧಾರವಾಡ/ಕಲಬುರುಗಿ ರವರುಗಳಿಂದ ಸ್ವೀಕೃತವಾಗಿರುವ ಪ್ರಸ್ತಾವನೆಗಳನುಸಾರ
5. ಏಕ ಕಡತದಲ್ಲಿ ದಿನಾಂಕ:19.07.2024ರಂದು ಸರ್ಕಾರವು ನೀಡಿರುವ ಅನುಮೋದನೆಯನುಸಾರ

*******

**ಪ್ರಸ್ತಾವನೆ:**

ವಿಷಯಾನ್ವಯವಾಗಿ ಉಲ್ಲೇಖ-1 ರಿಂದ 3ರ ವರೆಗಿನ ಆದೇಶಗಳನ್ವಯ 2024-25ನೇ ಸಾಲಿಗೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಉನ್ನತೀಕರಿಸಿ (6-7/8ನೇ ತರಗತಿ) ಪ್ರಾರಂಭಿಸಲು ಮತ್ತು ಹಾಲಿ ನಡೆಯುತ್ತಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 8ನೇ ತರಗತಿಗಳನ್ನು ಪ್ರಾರಂಭಿಸುವ ಕುರಿತಂತೆ ತಾಲ್ಲೂಕು/ಜಿಲ್ಲಾ/ವಿಭಾಗ ಹಂತದ ಪರಿಶೀಲನಾ ಸಮಿತಿಗಳು ಪರಿಶೀಲಿಸಿ ಶಿಫಾರಸ್ಸಿನೊಂದಿಗೆ ಈ ಕಛೇರಿಗೆ ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದ್ದು, ಈ ಪೈಕಿ ಮೊದಲನೇ ಹಂತದಲ್ಲಿ 55 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗೆ ಹಾಗೂ 41 ಸರ್ಕಾರಿ ಹಿರಿಯ ಪ್ರಾಥಮಿಕ (1 ರಿಂದ 7ನೇ ತರಗತಿ ) ಶಾಲೆಗಳನ್ನು 8ನೇ ತರಗತಿಗೆ ಉನ್ನತೀಕರಿಸಿ ಆದೇಶಿಸಲಾಗಿರುತ್ತದೆ.

ಪ್ರಸ್ತುತ ಉಲ್ಲೇಖ-4ರನ್ವಯ ಮತ್ತೊಮ್ಮೆ ಎರಡನೇ ಹಂತದಲ್ಲಿ ಜನಪ್ರತಿನಿಧಿಗಗಳು, ಶಾಸಕರು, ಸಚಿವರು ಹಾಗೂ ಸಂಬಂಧಿಸಿದ ಉಪನಿರ್ದೇಶಕರು ಮತ್ತು ಅಪರ ಆಯುಕ್ತರು ಕಲಬುರುಗಿ ಮತ್ತು ಧಾರವಾಡ ರವರು ಶಿಫಾರಸ್ಸಿನೊಂದಿಗೆ ಈ ಕೆಳಕಂಡಂತೆ 2024-25ನೇ ಸಾಲಿಗೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಉನ್ನತೀಕರಿಸಿ (6-7/8ನೇ ತರಗತಿ) ಪ್ರಾರಂಭಿಸಲು ಮತ್ತು ಹಾಲಿ ನಡೆಯುತ್ತಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 8ನೇ ತರಗತಿಗಳನ್ನು ಪ್ರಾರಂಭಿಸಲು ಕೋರಿ ಪ್ರಸ್ತಾವನೆಗಳನ್ನು ಸಲ್ಲಿಸಲಾಗಿರುತ್ತದೆ.

ಸದರಿ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ ಎಲ್ಲಾ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ, ಮಕ್ಕಳ ಸಂಖ್ಯೆ ಗಣನೀಯವಾಗಿ ಹೆಚ್ಚಿರುವ, ಬೋಧನೆಗೆ ಶಿಕ್ಷಕರ ಲಭ್ಯತೆ ಇರುವ ಹಾಗೂ ಇಲಾಖೆ/ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆಯಾಗದಂತೆ ಸ್ಥಳೀಯ ಸಂಪನ್ಮೂಲಗಳನ್ನು ಬಳಸಿಕೊಂಡು ಪ್ರಾರಂಭಿಸಲು ಅರ್ಹವಿರುವ ಶಾಲೆಗಳನ್ನು ಪರಿಶೀಲಿಸಿ,

ಪರಿಗಣಿಸಿ ಸೂಕ್ತ ಶಿಫಾರಸ್ಸಿನೊಂದಿಗೆ ಏಕ ಕಡತದ ಮೂಲಕ ಈ ಕೆಳಕಂಡಂತೆ ಸರ್ಕಾರದ ಅನುಮೋದನೆ ಕೋರಲಾಗಿರುತ್ತದೆ.

| ಕ್ರ ಸಂ | ವಿಷಯ | ಪ್ರಸ್ತಾವನೆಗಳನ್ನು ಪರಿಶೀಲಿಸಿ ಶಿಫಾರಸ್ಸು ಮಾಡಿದ ವಿವರ | |
|---|---|---|---|
| | | ಸ್ವೀಕೃತವಾದ ಪ್ರಸ್ತಾವನೆಗಳ ಸಂಖ್ಯೆ | ಶಿಫಾರಸುಮಾಡಿದ ಪ್ರಸ್ತಾವನೆಗಳ ಸಂಖ್ಯೆ |
| 1 | ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗೆ (6 ರಿಂದ 7ನೇ ತರಗತಿ) ಉನ್ನತೀಕರಣ ಕುರಿತು. | 4 | 4 |
| 2 | ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 8ನೇ ತರಗತಿಗೆ ಉನ್ನತೀಕರಿಸಿ ಪ್ರಾರಂಭಿಸುವ ಕುರಿತು. | 50 | 50 |

ಉಲ್ಲೇಖ-5ರನ್ವಯ ಮೇಲ್ಕಂಡಂತೆ ಎರಡನೇ ಹಂತದಲ್ಲಿ 2024-25ನೇ ಸಾಲಿಗೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಉನ್ನತೀಕರಿಸಲು ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 8ನೇ ತರಗತಿಗೆ ಉನ್ನತೀಕರಿಸಿ ಪ್ರಾರಂಭಿಸಲು ಶಿಫಾರಸ್ಸು ಮಾಡಲಾದ ಪ್ರಸ್ತಾವನೆಗಳಿಗೆ ಸರ್ಕಾರವು ಆಡಳಿತಾತ್ಮಕ ಮತ್ತು ಮಕ್ಕಳ ಶೈಕ್ಷಣಿಕ ಹಿತದೃಷ್ಠಿಯಿಂದ ಅನುಮೋದನೆ ನೀಡಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಷರತ್ತುಗಳನ್ನು ವಿಧಿಸಿ ಆದೇಶಿಸಿದೆ.

**ಆದೇಶ:**

ಮೇಲ್ಕಂಡಂತೆ ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ವಯ ಸರ್ಕಾರಿ ಪ್ರಾಥಮಿಕ ಶಾಲೆಗಳನ್ನು ಉನ್ನತೀಕರಿಸುವಂತೆ ಕೋರಿ ಉಲ್ಲೇಖ-4ರನ್ವಯ ಜನಪ್ರತಿನಿಧಿಗಳು, ಶಾಸಕರು, ಸಚಿವರು ಹಾಗೂ ಇಲಾಖಾಧಿಕಾರಿಗಳ ಶಿಫ್ಫಾರಸ್ಸಿನ ಹಿನ್ನೆಲೆಯಲ್ಲಿ ಉಲ್ಲೇಖ-5ರನ್ವಯ ಸರ್ಕಾರವು ಏಕಕಡತದಲ್ಲಿ ಅನುಮೋದನೆ ನೀಡಿರುವಂತೆ ಕೆಳಕಂಡ ನಿಬಂಧನೆಗಳನ್ನು ಪಾಲಿಸುವ ಷರತ್ತುಗಳಿಗೊಳಪಟ್ಟು ಸರ್ಕಾರಿ ಶಾಲೆಗಳ ಬಲವರ್ಧನೆ ಮತ್ತು ಮಕ್ಕಳ ಶೈಕ್ಷಣಿಕ ಹಿತದೃಷ್ಠಿಯಿಂದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗೆ (6 ರಿಂದ 7/8ನೇ ತರಗತಿ) ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 7ನೇ ತರಗತಿಯನ್ನು 8ನೇ ತರಗತಿಯಾಗಿ ಉನ್ನತೀಕರಿಸಿ ಪ್ರಾರಂಭಿಸುವ ಕುರಿತಂತೆ ಪ್ರಥಮ ಆದ್ಯತೆ ಮೇರೆಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ/ ಮಕ್ಕಳ ದಾಖಲಾತಿ ಹೆಚ್ಚಿರುವ ಹಾಗೂ ಕಳೆದ ಸಾಲಿನಲ್ಲಿ ಕ್ರಮವಾಗಿ 5 ಮತ್ತು 7ನೇ ತರಗತಿಯಲ್ಲಿ ಕನಿಷ್ಠ 25 ಮಕ್ಕಳ ದಾಖಲಾತಿ ಇರುವ ಹಾಗೂ ಭೌಗೋಳಿಕ ಅಡೆತಡೆಗಳು ಇರುವ ಶಾಲೆಗಳನ್ನು ಆದ್ಯತೆ ಮೇಲೆ ಪರಿಗಣಿಸಿ ಈ ಕೆಳಕಂಡಂತೆ ಪ್ರಾರಂಭಿಸಲು ಅನುಮತಿ ನೀಡಿ ಆದೇಶಿಸಿದೆ. **(ಅನುಮೋದಿತ ಶಾಲೆಗಳ ಪಟ್ಟಿಯನ್ನು ಅನುಬಂಧ-1 ಮತ್ತು 2ರಲ್ಲಿ ದಾಖಲಿಸಿ ಇದರೊಂದಿಗೆ ಅನುಬಂಧಿಸಿದೆ)**

| ಕ್ರ ಸಂ | ವಿಷಯ | ಅನುಮೋದನೆ ನೀಡಿದ ಪ್ರಸ್ತಾವನೆಗಳ ಸಂಖ್ಯೆ |
|---|---|---|
| 1 | ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗೆ (6 ರಿಂದ 7ನೇ ತರಗತಿ) ಉನ್ನತೀಕರಣ ಕುರಿತು. | 4 |
| 2 | ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 8ನೇ ತರಗತಿಗೆ ಉನ್ನತೀಕರಣ ಕುರಿತು. | 50 |

**ಸಂಬಂಧಿಸಿದ ಇಲಾಖಾಧಿಕಾರಿಗಳು ಪಾಲಿಸಬೇಕಾದ ನಿಬಂಧನೆಗಳು:**

1. ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟುಮಾಡದೆ ಸ್ಥಳೀಯ ಸಂಪನ್ಮೂಲಗಳಿಂದ ಹೊಂದಾಣಿಕೆ ಮಾಡಿಕೊಂಡು ಪ್ರಾರಂಭಿಸುವುದು.
2. ಶಾಲೆಯಲ್ಲಿ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಯು ಗಮನಾರ್ಹವಾಗಿ ಹೆಚ್ಚಿರುವಂತೆ ಅನುಪಾಲನೆ ಮಾಡುವುದು.
3. ಮೇಲ್ಕಂಡಂತೆ ಅನುಮೋದನೆ ನೀಡಲಾದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ 2024-25ನೇ ಸಾಲಿಗೆ ಉನ್ನತೀಕರಿಸಿ 6ನೇ ತರಗತಿಯನ್ನು ಪ್ರಾರಂಭಿಸಿ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಸ್ವಾಭಾವಿಕ ಬೆಳವಣಿಗೆಯಡಿ 7ನೇ ತರಗತಿಗೆ ಮುಂದುವರೆಸುವುದು.
4. ಮೇಲ್ಕಂಡಂತೆ ಅನುಮೋದನೆ ನೀಡಲಾದ ಹಾಲಿ ನಡೆಯುತ್ತಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿನ 7ನೇ ತರಗತಿಯನ್ನು ಉನ್ನತೀಕರಿಸಿ 2024-25ನೇ ಸಾಲಿನಿಂದ 8ನೇ ತರಗತಿಯನ್ನು ಪ್ರಾರಂಭಿಸುವುದು
5. ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ರವರು ಮೇಲ್ಕಂಡಂತೆ ಅನುಮೋದನೆಯಾದ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ನಿರ್ವಹಣೆಗೆ SATS ನಲ್ಲಿ ಅವಕಾಶ ಕಲ್ಪಿಸುವುದು.
6. ಅನುಮೋದಿತ ಸದರಿ ಶಾಲೆಯಲ್ಲಿ ಈಗಾಗಲೇ ನಿರ್ವಹಣೆಯಲ್ಲಿರುವ ಸ್ಥಳೀಯ ಸಂಪನ್ಮೂಲಗಳಾದ ತರಗತಿ ಕೊಠಡಿ, ಕಟ್ಟಡ ಹಾಗೂ ಇತರೆ ಮೂಲಭೂತ ಸೌಕರ್ಯಗಳಲ್ಲಿಯೇ ಹೊಂದಾಣಿಕೆ ಮಾಡಿ 6 ಮತ್ತು 8ನೇ ತರಗತಿಯನ್ನು ಕ್ರಮವಾಗಿ ಪ್ರಾರಂಭಿಸುವುದು. ಯಾವುದೇ ಹೆಚ್ಚುವರಿ ಸೌಲಭ್ಯ ಕೋರುವಂತಿಲ್ಲ. ಇಲಾಖೆ ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುವುದು.
7. ಮಕ್ಕಳ ಬೋಧನೆಗೆ ತೊಂದರೆಯಾಗದಂತೆ ಹಾಲಿ ಇರುವ ಶಿಕ್ಷಕರ ಸೇವೆಯನ್ನು ಸೂಕ್ತ ರೀತಿಯಲ್ಲಿ ಬಳಸಿಕೊಂಡು/ ಅಕ್ಕ-ಪಕ್ಕದ ಶಾಲೆಗಳಲ್ಲಿನ ಹೆಚ್ಚುವರಿ ಶಿಕ್ಷಕರನ್ನು ಆಂತರಿಕ ಹೊಂದಾಣಿಕೆ ಮಾಡಿಕೊಳ್ಳುವುದು ಹಾಗೂ ಖಾಲಿ ಹುದ್ದೆಗಳಿದ್ದಲ್ಲಿ ಅತಿಥಿ ಶಿಕ್ಷಕರ ನೇಮಿಸಿಕೊಂಡು ಬೋಧನೆಗೆ ಕ್ರಮವಹಿಸುವುದು. ಯಾವುದೇ ಕಾರಣಕ್ಕೂ ಶೈಕ್ಷಣಿಕ ವರ್ಷದಲ್ಲಿ ಮಕ್ಕಳಿಗೆ ಕಲಿಕಾ ಹಿನ್ನಡೆಯಾಗದಂತೆ ಸಂಬಂಧಿಸಿದ ಉಪನಿರ್ದೇಶಕರು (ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೂಕ್ತ ಕ್ರಮ ವಹಿಸುವುದು.
8. ಮಕ್ಕಳ ಸುರಕ್ಷತೆಗೆ ಸಂಬಂಧಿಸಿದಂತೆ ನಿಯಮಾನುಸಾರ ಎಲ್ಲಾ ಅಗತ್ಯ ಕ್ರಮಗಳನ್ನು ವಹಿಸುವುದು.
9. ವಿದ್ಯಾರ್ಥಿಗಳ ಸಂಖ್ಯೆಗಳಿಗನುಗುಣವಾಗಿ ಇಲಾಖಾ ಪ್ರೋತ್ಸಾಹಕ ಯೋಜನೆಗಳಾದ ರಾಜ್ಯ ಪಠ್ಯ ಕ್ರಮದ ಉಚಿತ ಪಠ್ಯ ಪುಸ್ತಕಗಳ ಬೇಡಿಕೆ ಪಟ್ಟಿಯನ್ನು ಸಕಾಲದಲ್ಲಿ ಕರ್ನಾಟಕ ಪಠ್ಯ ಪುಸ್ತಕ ಸಂಘಕ್ಕೆ ಸಲ್ಲಿಸುವುದು. ಹಾಗೂ ಮಧ್ಯಾಹ್ನ ಉಪಹಾರ ಯೋಜನೆಯಡಿ ಆಹಾರ ಪೂರೈಕೆ, ಉಚಿತ ಸಮವಸ್ತ್ರ, ಶೂ ಸಾಕ್ಸ್, ಮತ್ತು ಇತರೆ ಪ್ರೋತ್ಸಾಹದಾಯಕ ಯೋಜನೆಗಳಿಗೆ ಬೇಡಿಕೆಯನ್ನು ಸಂಬಂಧಿಸಿದ ಕಛೇರಿಗಳಿಗೆ ಸಲ್ಲಿಸಿ/ಹೊಂದಾಣಿಕೆ ಮಾಡಿಕೊಂಡು ಮಕ್ಕಳಿಗೆ ಸಕಾಲದಲ್ಲಿ ದೊರೆಯುವಂತೆ ಮಾಡಿ ಅನುಪಾಲನೆ ಮಾಡತಕ್ಕದ್ದು .
10. ಇದರೊಂದಿಗೆ ಸರ್ಕಾರ ಮತ್ತು ಇಲಾಖೆಯಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಮಾರ್ಗದರ್ಶನ/ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

**ಆಯುಕ್ತರು**
**ಶಾಲಾ ಶಿಕ್ಷಣ ಇಲಾಖೆ**

**ಗೆ**

1. ಸಂಬಂಧಿಸಿದ ಉಪನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ
2. ಸಂಬಂಧಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲಾ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ

ಕರ್ನಾಟಕ ಸರ್ಕಾರ

# ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ ನೃಪತುಂಗ ರಸ್ತೆ ಬೆಂಗಳೂರು-1

ಸಂಖ್ಯೆ: ಎಡಿಎಂ-2(4) ಕಿ.ಪ್ರಾ.ಶಾ.ಉ 01/2023-24 ದಿನಾಂಕ: 13-06-2024

## ಜ್ಞಾಪನ

**ವಿಷಯ:** 2024-25ನೇ ಸಾಲಿಗೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ (6-7/8ನೇ ತರಗತಿ) ಶಾಲೆಗಳನ್ನಾಗಿ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿನ 7ನೇ ತರಗತಿಯನ್ನು 8ನೇ ತರಗತಿಯಾಗಿ ಉನ್ನತ್ತೀಕರಿಸಿ ಪ್ರಾರಂಭಿಸುವ ಬಗ್ಗೆ.

**ಉಲ್ಲೇಖ:** 1.ಈ ಕಛೇರಿ ಸುತ್ತೋಲೆ ಪತ್ರ ಸಂಖ್ಯೆ ಎಡಿಎಂ-2(4)ಹೊ.ಶಾ.ಮ.ವಿ.ಪ್ರಾ 1/2023-24 ದಿನಾಂಕ: 12-02-2024 & ದಿನಾಂಕ: 11.03.2024

2.ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) & (ಅಭಿವೃದ್ಧಿ) ರವರುಗಳಿಂದ ಹಾಗೂ ಅಪರ ಆಯುಕ್ತರು ಧಾರವಾಡ/ಕಲಬುರುಗಿ ರವರುಗಳಿಂದ ಸ್ವೀಕೃತವಾಗಿರುವ ಪ್ರಸ್ತಾವನೆಗಳನುಸಾರ

3. ದಿನಾಂಕ: 06.06.2024ರಂದು ಸರ್ಕಾರದ ಅನುಮೋದನೆ ಕೋರಿ ಏಕ ಕಡತದೊಂದಿಗೆ ಪ್ರಸ್ತಾವನೆ ಸಲ್ಲಿಸಿದ ಕುರಿತು

4.ಏಕ ಕಡತದಲ್ಲಿ ದಿನಾಂಕ:10.06.2024ರಂದು ಸರ್ಕಾರವು ನೀಡಿರುವ ಅನುಮೋದನೆಯನುಸಾರ

*******

**ಪ್ರಸ್ತಾವನೆ:**

ವಿಷಯಾನ್ವಯವಾಗಿ ಉಲ್ಲೇಖ-1ರನ್ವಯ ಸರ್ಕಾರಿ ಶಾಲೆಗಳ ಬಲವರ್ಧನೆಗಾಗಿ 2024-25ನೇ ಸಾಲಿಗೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಉನ್ನತೀಕರಿಸಿ (6-7/8ನೇ ತರಗತಿ) ಪ್ರಾರಂಭಿಸಲು ಮತ್ತು ಹಾಲಿ ನಡೆಯುತ್ತಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 8ನೇ ತರಗತಿಗಳನ್ನು ಪ್ರಾರಂಭಿಸುವ ಕುರಿತಂತೆ ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿರುತ್ತದೆ.

ಉಲ್ಲೇಖ-2ರನ್ವಯ ಸದರಿ ಸ್ವೀಕೃತ ಪ್ರಸ್ತಾವನೆಗಳನ್ನು ತಾಲ್ಲೂಕು/ಜಿಲ್ಲಾ/ವಿಭಾಗ ಹಂತದ ಪರಿಶೀಲನಾ ಸಮಿತಿಗಳು ನಿಗಧಿಪಡಿಸಿದ ಮಾನದಂಡಗಳಂತೆ ಪರಿಶೀಲಿಸಿ ಅಗತ್ಯ ಶಿಫಾರಸ್ಸಿನ ಮೂಲಕ ಪ್ರಸ್ತಾವನೆಗಳನ್ನು ಈ ಕಛೇರಿಗೆ ಸಲ್ಲಿಸಲಾಗಿರುತ್ತದೆ.

ಉಲ್ಲೇಖ-3ರನ್ವಯ ಸದರಿ ತಾಲ್ಲೂಕು/ಜಿಲ್ಲಾ/ವಿಭಾಗ ಹಂತದ ಸಮಿತಿಗಳು ಸಲ್ಲಿಸಿದ ಪ್ರಸ್ತಾವನೆಗಳನ್ನು ಈ ಕಚೇರಿಯಿಂದ ಪುನರ್ ಪರಿಶೀಲಿಸಿ ಪ್ರಥಮ ಆಧ್ಯತೆ ಮೇಲೆ ಎಲ್ಲಾ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ, ಮಕ್ಕಳ ಸಂಖ್ಯೆ ಗಣನೀಯವಾಗಿ ಹೆಚ್ಚಿರುವ, ಬೋಧನೆಗೆ ಶಿಕ್ಷಕರ ಲಭ್ಯತೆ ಇರುವ ಹಾಗೂ ಇಲಾಖೆ/ಸರ್ಕಾರಕ್ಕೆ ಯಾವುದೇ ಆರ್ಥಿಕ ಹೊರೆಯಾಗದಂತೆ ಸ್ಥಳೀಯ ಸಂಪನ್ಮೂಲಗಳನ್ನು ಬಳಸಿಕೊಂಡು ಪ್ರಾರಂಭಿಸಲು ಅರ್ಹವಿರುವ ಶಾಲೆಗಳನ್ನು ಪರಿಶೀಲಿಸಿ, ಪರಿಗಣಿಸಿ ಸೂಕ್ತ ಶಿಫಾರಸ್ಸಿನೊಂದಿಗೆ ಏಕ ಕಡತದ ಮೂಲಕ ಈ ಕೆಳಕಂಡಂತೆ ಸರ್ಕಾರದ ಅನುಮೋದನೆ ಕೋರಲಾಗಿರುತ್ತದೆ.

| ಕ್ರ ಸಂ | ವಿಷಯ | ಪ್ರಸ್ತಾವನೆಗಳನ್ನು ಪರಿಶೀಲಿಸಿ ಶಿಫಾರಸ್ಸು ಮಾಡಿದ ವಿವರ | |
|---|---|---|---|
| | | ಸ್ವೀಕೃತವಾದ ಪ್ರಸ್ತಾವನೆಗಳ ಸಂಖ್ಯೆ | ಶಿಫಾರಸುಮಾಡಿದ ಪ್ರಸ್ತಾವನೆಗಳ ಸಂಖ್ಯೆ |
| 1 | ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗೆ (6 ರಿಂದ 7ನೇ ತರಗತಿ) ಉನ್ನತೀಕರಣ ಕುರಿತು. | **145** | **55** |
| 2 | ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 8ನೇ ತರಗತಿಗೆ ಉನ್ನತೀಕರಿಸಿ ಪ್ರಾರಂಭಿಸುವ ಕುರಿತು. | **68** | **41** |

ಉಲ್ಲೇಖ-4ರನ್ವಯ 2024-25ನೇ ಸಾಲಿನಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗಳನ್ನಾಗಿ ಉನ್ನತೀಕರಿಸಿ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 8ನೇ ತರಗತಿ ಉನ್ನತೀಕರಿಸಿ ಪ್ರಾರಂಭಿಸಲು ಸರ್ಕಾರವು ಆಡಳಿತಾತ್ಮಕ ಮತ್ತು ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಅನುಮೋದನೆ ನೀಡಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಷರತ್ತುಗಳನ್ನು ವಿಧಿಸಿ ಆದೇಶಿಸಿದೆ.

**ಆದೇಶ:**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ವಯ ತಾಲ್ಲೂಕು/ಜಿಲ್ಲಾ/ರಾಜ್ಯ ಹಂತದ ಸಮಿತಿಗಳು ಮಾಡಿರುವ ಶಿಫಾರಸ್ಸಿನ ಹಿನ್ನೆಲೆಯಲ್ಲಿ ಮತ್ತು ಉಲ್ಲೇಖ-4ರನ್ವಯ ಸರ್ಕಾರವು ಏಕಕಡತದಲ್ಲಿ ನೀಡಿರುವ ಅನುಮೋದನೆಯಂತೆ ಕೆಳಕಂಡ ನಿಬಂಧನೆಗಳನ್ನು ಪಾಲಿಸುವ ಷರತ್ತುಗಳಿಗೊಳಪಟ್ಟು ಸರ್ಕಾರಿ ಶಾಲೆಗಳ ಬಲವರ್ಧನೆ ಮತ್ತು ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗೆ (6 ರಿಂದ 7/8ನೇ ತರಗತಿ) ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 7ನೇ ತರಗತಿಯನ್ನು 8ನೇ ತರಗತಿಯಾಗಿ ಉನ್ನತೀಕರಿಸಿ ಪ್ರಾರಂಭಿಸುವ ಕುರಿತಂತೆ ಪ್ರಥಮ ಆದ್ಯತೆ ಮೇರೆಗೆ ಅಗತ್ಯ ಮೂಲ ಭೂತ ಸೌಲಭ್ಯಗಳನ್ನು ಹೊಂದಿರುವ/ ಮಕ್ಕಳ ದಾಖಲಾತಿ ಹೆಚ್ಚಿರುವ ಹಾಗೂ ಕಳೆದ ಸಾಲಿನಲ್ಲಿ ಕ್ರಮವಾಗಿ 5 ಮತ್ತು 7ನೇ ತರಗತಿಯಲ್ಲಿ ಕನಿಷ್ಠ 25 ಮಕ್ಕಳ ದಾಖಲಾತಿ ಇರುವ ಹಾಗೂ ಭೌಗೋಳಿಕ ಅಡೆತಡೆಗಳು ಇರುವ ಶಾಲೆಗಳನ್ನು ಆದ್ಯತೆ ಮೇಲೆ ಪರಿಗಣಿಸಿ ಈ ಕೆಳಕಂಡಂತೆ ಪ್ರಾರಂಭಿಸಲು ಅನುಮತಿ ನೀಡಿ ಆದೇಶಿಸಿದೆ. **(ಅನುಮೋದಿತ ಶಾಲೆಗಳ ಪಟ್ಟಿಯನ್ನು ಅನುಬಂಧ-1 ಮತ್ತು 2ರಲ್ಲಿ ದಾಖಲಿಸಿ ಇದರೊಂದಿಗೆ ಅನುಬಂಧಿಸಿದೆ)**

| ಕ್ರ ಸಂ | ವಿಷಯ | ಅನುಮೋದನೆ ನೀಡಿದ ಪ್ರಸ್ತಾವನೆಗಳ ಸಂಖ್ಯೆ |
|---|---|---|
| 1 | ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳನ್ನು ಹಿರಿಯ ಪ್ರಾಥಮಿಕ ಶಾಲೆಗೆ (6 ರಿಂದ 7ನೇ ತರಗತಿ) ಉನ್ನತೀಕರಣ ಕುರಿತು. | **55** |
| 2 | ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 8ನೇ ತರಗತಿಗೆ ಉನ್ನತೀಕರಣ ಕುರಿತು. | **41** |

**ಸಂಬಂಧಿಸಿದ ಇಲಾಖಾಧಿಕಾರಿಗಳು ಪಾಲಿಸಬೇಕಾದ ನಿಬಂಧನೆಗಳು:**

1. ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟುಮಾಡದೆ ಸ್ಥಳೀಯ ಸಂಪನ್ಮೂಲಗಳಿಂದ ಹೊಂದಾಣಿಕೆ ಮಾಡಿಕೊಂಡು ಪ್ರಾರಂಭಿಸುವುದು.
2. ಶಾಲೆಯಲ್ಲಿ ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಯು ಗಮನಾರ್ಹವಾಗಿ ಹೆಚ್ಚಿರುವಂತೆ ಅನುಪಾಲನೆ ಮಾಡುವುದು.
3. ಮೇಲ್ಕಂಡಂತೆ ಅನುಮೋದನೆ ನೀಡಲಾದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ 2024-25ನೇ ಸಾಲಿಗೆ ಉನ್ನತೀಕರಿಸಿ 6ನೇ ತರಗತಿಯನ್ನು ಪ್ರಾರಂಭಿಸಿ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಸ್ವಾಭಾವಿಕ ಬೆಳವಣಿಗೆಯಡಿ 7ನೇ ತರಗತಿಗೆ ಮುಂದುವರೆಸುವುದು.
4. ಮೇಲ್ಕಂಡಂತೆ ಅನುಮೋದನೆ ನೀಡಲಾದ ಹಾಲಿ ನಡೆಯುತ್ತಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿನ 7ನೇ ತರಗತಿಯನ್ನು ಉನ್ನತೀಕರಿಸಿ 2024-25ನೇ ಸಾಲಿನಿಂದ 8ನೇ ತರಗತಿಯನ್ನು ಪ್ರಾರಂಭಿಸುವುದು
5. ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ರವರು ಮೇಲ್ಕಂಡಂತೆ ಅನುಮೋದನೆ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ನಿರ್ವಹಣೆಗೆ SATS ನಲ್ಲಿ ಅವಕಾಶ ಕಲ್ಪಿಸುವುದು.
6. ಅನುಮೋದಿತ ಸದರಿ ಶಾಲೆಯಲ್ಲಿ ಈಗಾಗಲೇ ನಿರ್ವಹಣೆಯಲ್ಲಿರುವ ಸಂಪನ್ಮೂಲಗಳಾದ ತರಗತಿ ಕೊಠಡಿ, ಕಟ್ಟಡ ಹಾಗೂ ಇತರ ಮೂಲಭೂತ ಸೌಕರ್

ಹೊಂದಾಣಿಕೆ ಮಾಡಿ 6 ಮತ್ತು 8ನೇ ತರಗತಿಯನ್ನು ಕ್ರಮವಾಗಿ ಪ್ರಾರಂಭಿಸುವುದು. ಯಾವುದೇ ಹೆಚ್ಚುವರಿ ಸೌಲಭ್ಯ ಕೋರುವಂತಿಲ್ಲ. ಇಲಾಖೆ ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುವುದು.

7. ಮಕ್ಕಳ ಬೋಧನೆಗೆ ತೊಂದರೆಯಾಗದಂತೆ ಹಾಲಿ ಇರುವ ಶಿಕ್ಷಕರ ಸೇವೆಯನ್ನು ಸೂಕ್ತ ರೀತಿಯಲ್ಲಿ ಬಳಸಿಕೊಂಡು/ ಅಕ್ಕ-ಪಕ್ಕದ ಶಾಲೆಗಳಲ್ಲಿನ ಹೆಚ್ಚುವರಿ ಶಿಕ್ಷಕರನ್ನು ಆಂತರಿಕ ಹೊಂದಾಣಿಕೆ ಮಾಡಿಕೊಳ್ಳುವುದು ಹಾಗೂ ಖಾಲಿ ಹುದ್ದೆಗಳಿದ್ದಲ್ಲಿ ಅತಿಥಿ ಶಿಕ್ಷಕರ ನೇಮಿಸಿಕೊಂಡು ಬೋಧನೆಗೆ ಕ್ರಮವಹಿಸುವುದು. ಯಾವುದೇ ಕಾರಣಕ್ಕೂ ಶೈಕ್ಷಣಿಕ ವರ್ಷದಲ್ಲಿ ಮಕ್ಕಳಿಗೆ ಕಲಿಕಾ ಹಿನ್ನಡೆಯಾಗದಂತೆ ಸಂಬಂಧಿಸಿದ ಉಪನಿರ್ದೇಶಕರು (ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೂಕ್ತ ಕ್ರಮ ವಹಿಸುವುದು.
8. ಮಕ್ಕಳ ಸುರಕ್ಷತೆಗೆ ಸಂಬಂಧಿಸಿದಂತೆ ನಿಯಮಾನುಸಾರ ಎಲ್ಲಾ ಅಗತ್ಯ ಕ್ರಮಗಳನ್ನು ವಹಿಸುವುದು.
9. ವಿದ್ಯಾರ್ಥಿಗಳ ಸಂಖ್ಯೆಗಳಿಗನುಗುಣವಾಗಿ ಇಲಾಖಾ ಪ್ರೋತ್ಸಾಹಕ ಯೋಜನೆಗಳಾದ ರಾಜ್ಯ ಪಠ್ಯ ಕ್ರಮದ ಉಚಿತ ಪಠ್ಯ ಪುಸ್ತಕಗಳ ಬೇಡಿಕೆ ಪಟ್ಟಿಯನ್ನು ಸಕಾಲದಲ್ಲಿ ಕರ್ನಾಟಕ ಪಠ್ಯ ಪುಸ್ತಕ ಸಂಘಕ್ಕೆ ಸಲ್ಲಿಸುವುದು. ಹಾಗೂ ಮಧ್ಯಾಹ್ನ ಉಪಹಾರ ಯೋಜನೆಯಡಿ ಆಹಾರ ಪೂರೈಕೆ, ಉಚಿತ ಸಮವಸ್ತ್ರ, ಶೂ ಸಾಕ್ಸ್, ಮತ್ತು ಇತರೆ ಪ್ರೋತ್ಸಾಹದಾಯಕ ಯೋಜನೆಗಳಿಗೆ ಬೇಡಿಕೆಯನ್ನು ಸಂಬಂಧಿಸಿದ ಕಛೇರಿಗಳಿಗೆ ಸಲ್ಲಿಸಿ/ಹೊಂದಾಣಿಕೆ ಮಾಡಿಕೊಂಡು ಮಕ್ಕಳಿಗೆ ಸಕಾಲದಲ್ಲಿ ದೊರೆಯುವಂತೆ ಮಾಡಿ ಅನುಪಾಲನೆ ಮಾಡತಕ್ಕದ್ದು.
10. ಇದರೊಂದಿಗೆ ಸರ್ಕಾರ ಮತ್ತು ಇಲಾಖೆಯಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಮಾರ್ಗದರ್ಶನ/ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

20.10.2020

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

ಗೆ

1. ಸಂಬಂಧಿಸಿದ ಉಪನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ
2. ಸಂಬಂಧಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲಾ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ

**ಪ್ರತಿಯನ್ನು**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಶಾಲಾ ಶಿಕ್ಷಣ ಇಲಾಖೆ ಬೆಂಗಳೂರು-1 ರವರಿಗೆ ಗೌರವಗಳೊಂದಿಗೆ ಸಲ್ಲಿಸಿದೆ
2. ಅಪರ ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಧಾರವಾಡ/ಕಲಬುರುಗಿ
3. ರಾಜ್ಯ ಯೋಜನಾ ನಿರ್ದೇಶಕರು ಸಮಗ್ರ ಶಿಕ್ಷಣ ಕರ್ನಾಟಕ ನೃಪತುಂಗ ರಸ್ತೆ ಬೆಂಗಳೂರು-01
4. ಸಂಬಂಧಿಸಿದ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಪಂಚಾಯತ್ ರವರಿಗೆ
5. ವ್ಯವಸ್ಥಾಪಕ ನಿರ್ದೇಶಕರು ಕರ್ನಾಟಕ ಪಠ್ಯಪುಸ್ತಕ ಸಂಘ (ರಿ) ಮಲ್ಲೇಶ್ವರಂ ಬೆಂಗಳೂರು
6. ನಿರ್ದೇಶಕರು ಪ್ರಧಾನ ಮಂತ್ರಿ ಪೋಷಣ್ ಶಕ್ತಿ ಅಭಿಯಾನ್ (ಮದ್ಯಾಹ್ನ ಉಪಹಾರ ಯೋಜನೆ ) ಆಯುಕ್ತರ ಕಛೇರಿ ಬೆಂಗಳೂರು -1
7. ನಿರ್ದೇಶಕರು (ಪ್ರೌಢ ಶಿಕ್ಷಣ) ಶಾಲಾ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ ಬೆಂಗಳೂರು-1
8. ನಿರ್ದೇಶಕರು (ಅಲ್ಪ ಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ) ಶಾಲಾ ಶಿಕ್ಷಣ ಇಲಾಖೆ ಆಯುಕ್ತರ ಕಛೇರಿ ಬೆಂಗಳೂರು-1
9. ಸಹ ನಿರ್ದೇಶಕರು ಶಾಲಾ ಶಿಕ್ಷಣ (ಯೋಜನೆ) ಆಯುಕ್ತರ ಕಛೇರಿ ಬೆಂಗಳೂರು -1
10. ಸಂಬಂಧಿಸಿದ ಶಾಲೆಗಳ ಮುಖ್ಯ ಶಿಕ್ಷಕರು ಗಳಿಗೆ ಅಗತ್ಯ ಕ್ರಮಕ್ಕಾಗಿ
11. ಕಛೇರಿ ಪ್ರತಿ